ವಿಜಯಪುರ | ಸಂಪುಟ 02 | ಸಂಚಿಕೆ 84 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com | RNI NO: KARKAN/2023/86203 | ಮಂಗಳವಾರ, ಮೇ 21, 2024

"ರಾಜ್ಯದಲ್ಲಿ ಕೊಲೆ, ಕಳ್ಳತನ,ದರೋಡೆ ಹೆಚ್ಚಾಗಿದೆ. ಮಳೆ ಸುರಿಯುವುದಕ್ಕಿಂತ ಹೆಚ್ಚಾಗಿ ಕೊಲೆಗಳು ನಡೆಯುತ್ತಿವೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೌಡಿಗಳಿಗೆ, ಕೊಲೆಗಡುಕರಿಗೆ ಹಬ್ಬ. ಈ ಹಬ್ಬಕ್ಕೆ ಕಾಂಗ್ರೆಸ್ಸೇ ನೇರ ಕಾರಣ."

– ಆರ್.ಅಶೋಕ್

ವಿಧಾನಸಭೆ ವಿರೋಧ ಪಕ್ಷದ ನಾಯಕರು




**11 ಸ್ಥಾನಗಳಿಗೆ ಚುನಾವಣಾ ದಿನಾಂಕ ಘೋಷಣೆ । ನಾಮಪತ್ರ ಸಲ್ಲಿಸಲು ಜೂ.3 ಕೊನೆಯ ದಿನ । ಜೂ.13ರಂದು ಸಂಜೆ 5ಕ್ಕೆ ಮತ ಎಣಿಕೆ**

# ಜೂನ್ 13ರಂದು ರಾಜ್ಯ ವಿಧಾನ ಪರಿಷತ್ ಚುನಾವಣೆ

ಬೆಂಗಳೂರು: ರಾಜ್ಯ ವಿಧಾನ ಪರಿಷತ್‌ನ 11 ಸ್ಥಾನಗಳಿಗೆ ಚುನಾವಣಾ ದಿನಾಂಕ ಘೋಷಣೆಯಾಗಿದ್ದು, ಜೂನ್ 13ರಂದು ಮತದಾನ ನಡೆಯಲಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

ವಿಧಾನ ಪರಿಷತ್ ಚುನಾವಣೆಗೆ ನಾಮಪತ್ರ ಸಲ್ಲಿಸಲು ಜೂ.3 ಕೊನೆಯ ದಿನವಾಗಿದ್ದು, ಜೂನ್ 4ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಅಲ್ಲದೆ, ಮತದಾನದ ದಿನವಾದ ಜೂನ್ 13ರಂದು ಸಂಜೆ 5 ಗಂಟೆಗೆ ಮತ ಎಣಿಕೆ ಕಾರ್ಯ ನಡೆಯಲಿದೆ ಎಂದು ಚು.ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

ವಿಧಾನಸಭೆಯಿಂದ ವಿಧಾನಪರಿಷತ್‌ಗೆ ಚುನಾಯಿತರಾಗಿರುವ 11 ಸದಸ್ಯರ ಅವಧಿ ಜೂನ್ 17ಕ್ಕೆ ಕೊನೆಗೊಳ್ಳಲಿದೆ. ಅರವಿಂದ ಕುಮಾರ್ ಅರಳಿ, ಎನ್.ಎಸ್.ಬೋಸರಾಜ್, ಕೆ.ಗೋವಿಂದರಾಜ್, ಡಾ.ತೇಜಶ್ವಿನಿ ಗೌಡ, ಮುನಿರಾಜುಗೌಡ, ಕೆ.ಪಿ.ನಂಜುಂಡಿ, ರಘುನಾಥ್ ರಾವ್ ಮಲ್ಕಾಪುರೆ, ಎನ್.ರವಿ ಕುಮಾರ್, ಎಸ್.ರುದ್ರೇಗೌಡ, ಎಚ್.ಹರೀಶ್ ಕುಮಾರ್, ಬಿ.ಎಂ.ಫಾರೂಕ್ ಅವರ ಅವಧಿ ಕೊನೆಗೊಳ್ಳಲಿದೆ. ಈ ಹಿನ್ನೆಲೆ ಚುನಾವಣೆಯನ್ನು ಘೋಷಣೆ ಮಾಡಲಾಗಿದೆ.

–ಮೇ 27ರಂದು ಚುನಾವಣಾ ಅಧಿಸೂಚನೆ

–ಜೂ. 3ರಂದು ನಾಮಪತ್ರ ಸಲ್ಲಿಕೆಗೆ ಕೊನೆ ದಿನ

–ಜೂ.4ರಂದು ನಾಮಪತ್ರ ಪರಿಶೀಲನೆ



–ಜೂ.6ರಂದು ನಾಮಪತ್ರ ವಾಪಸ್ ಪಡೆಯಲು ಕೊನೆ ದಿನ

–ಜೂ. 13ರಂದು ಮತದಾನ

–ಜೂ.13ರ ಸಂಜೆ 5 ಗಂಟೆಗೆ ಮತ ಎಣಿಕೆ

ವಿಧಾನಸಭೆಯ ಬಲಾಬಲದ ಪ್ರಕಾರ, ಒಟ್ಟು 11 ಸ್ಥಾನಗಳಲ್ಲಿ ಏಳು ಕಾಂಗ್ರೆಸ್ ಪಾಲಾಗಲಿವೆ ಎಂದು ಅಂದಾಜಿಸಲಾಗಿದೆ. ಇನ್ನು ಬಿಜೆಪಿಗೆ ಮೂರು ಮತ್ತು ಜೆಡಿ–ಎಸ್‌ಗೆ ಒಂದು ಸ್ಥಾನ ದೊರಕಲಿದೆ, ಇನ್ನು ಜಗದೀಶ್ ಶೆಟ್ಟರ್ ಅವರ ಸ್ಥಾನ ಕಾಂಗ್ರೆಸ್ ತೆಕ್ಕೆಗೆ ಹೋಗಲಿದೆ.


ಈ ಮೊದಲು ಕರ್ನಾಟಕ ವಿಧಾನ ಪರಿಷತ್ತಿನ 3 ಶಿಕ್ಷಕರ ಕ್ಷೇತ್ರ ಮತ್ತು 3 ಪದವೀಧರ ಕ್ಷೇತ್ರ ಸೇರಿ ಒಟ್ಟು 6 ಸ್ಥಾನಗಳಿಗೆ ಚುನಾವಣೆ ನಡೆಸಲು ಚುನಾವಣಾ ಆಯೋಗ ವೇಳಾಪಟ್ಟಿಯನ್ನು ಪ್ರಕಟಿಸಿತ್ತು, ಅದರಂತೆ ಜೂನ್ 3ರಂದು ಮತದಾನ ನಡೆಯಲಿದೆ. ಜೂನ್ 6ರಂದು ಚುನಾವಣಾ ಫಲಿತಾಂಶ ಪ್ರಕಟವಾಗಲಿದೆ. ನಾಮಪತ್ರ ಸಲ್ಲಿಕೆಗೆ ಮೇ.16 ಕೊನೆಯ ದಿನವಾಗಿದ್ದು, ನಾಮಪತ್ರ ಪರಿಶೀಲನೆ ಪ್ರಕ್ರಿಯೆ ಮೇ.17ಕ್ಕೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಮೇ.20 ಕೊನೆಯ ದಿನವಾಗಿದೆ.

### ರಾಜ ನುಡಿ

ಅಸಲಿಗಿಂತ ಬಡ್ಡಿಯ ಮೇಲೆ ಮನುಷ್ಯನಿಗೆ ಒಲವು ಹೆಚ್ಚಂತೆ. ಹಾಗೆಯೇ ಅಜ್ಜ–ಅಜ್ಜಿಗೆ ಮಕ್ಕಳಿಗಿಂತ ಮೊಮ್ಮಕ್ಕಳ ಮೇಲೆ ಪ್ರೀತಿ ಜಾಸ್ತಿ. ಪ್ರೀತಿಗೆ ಮೇಲ್ಮುಖಕ್ಕಿಂತ ಇಳಿಮುಖ ಹರಿವಿನ ಪ್ರಮಾಣ ಹೆಚ್ಚು.

–ಡಾ. ರಾಜಶೇಖರ ನಾಗೂರ

### ವಚನ ಚಿಂತನ 383



*ಅಂಗಕ್ಕೆ ಲಿಂಗಕ್ಕೆ ಪೊಂಗೆ ಪರಿಮಳದ ಶೃಂಗಾರದ ಹಾರ.*

*ಕಂಗಳ ಬೆಳಗಿನಲ್ಲಿ ಮಂಗಳದ ಮಹಾಬೆಳಗಿರುತಿರಲು,*

*ಇದ ಅಂಗವಿಸಿ ನೋಡಿ, ಎರಡರ ಸಂಗಸುಖವನೊಂದುಗೂಡಿ,*

*ತಾನೇ ಬೇರೆ ಲಿಂಗವಾಗಿ ನಿಂದು, ಅಂಗವಳಿಯದೆ,*

*ಬಿಂದು ತುಳುಕದೆ, ನಂದಿ ಮುಂದುಗೆಡದ ಮುನ್ನ,*

*ನಿಮ್ಮೊಳು ಒಂದಾದ ಲಿಂಗೈಕ್ಯವನರಿದು,*

*ಕಣ್ದೆರೆದು ಕರಗಿ ಆಲಿ ನೀರಾದಂತಾದೆನಯ್ಯಾ,*

*ಬಸವಪ್ರಿಯ ಕೂಡಲಚೆನ್ನಬಸವಣ್ಣಾ.*

ಲಿಂಗಾಂಗ ಯೋಗದಲ್ಲಿ ಉಂಟಾಗುವ ಅನುಭಾವದ ವಿವಿಧ ಹಂತಗಳನ್ನು ಇಲ್ಲಿ ಹಡಪದ ಅಪ್ಪಣ್ಣನವರು ವಿವರವಾಗಿ ನೀಡಿದ್ದಾರೆ.ಅಂಗದೊಳಗಿನ ಪ್ರಾಣಲಿಂಗವನ್ನು ಮಹಾಲಿಂಗ ದೊಂದಿಗೆ ಬೆಸೆಯುವ ಪ್ರಕ್ರಿಯೇ ಇಷ್ಟಲಿಂಗಪೂಜೆ.ಇಲ್ಲಿ ಪ್ರಾರಂಭದಲ್ಲಿ ಕರಸ್ಥಲದ ಇಷ್ಟಲಿಂಗವನ್ನು ಅನಿಮಿಷ ದೃಷ್ಟಿ ಯಿಂದ ಗಮನಿಸುತ್ತಾ ಹೋದಹಾಗೆ ಮೊದಲು ಅಂಗ ಮತ್ತು ಲಿಂಗ ಬೇರೆ ಎಂಬ ಭಾವ ಇರುತ್ತದೆ. ಪರಿಶುದ್ಧವಾದ ಅಂಗ ಮತ್ತು ಪವಿತ್ರವಾದ ಲಿಂಗದ ಸಂಬಂಧವನ್ನು "ಅಂಗಕ್ಕೆ ಲಿಂಗಕ್ಕೆ ಪೊಂಗೆ ಪರಿಮಳದ ಶೃಂಗಾರದ ಹಾರ" ಎಂದಿದ್ದಾರೆ. ಕಪ್ಪಾದ ಇಷ್ಟಲಿಂಗದ ಮೇಲೆ ಕಣ್ಣಿಂದ ಹೊರಹೊಮ್ಮುವ ಕಿರಣಗಳು ತಾಗಿ ಪ್ರತಿಫಲನ ಗೊಂಡು ಮತ್ತೆ ಕಣ್ಣಿನ ಮೂಲಕವೇ ಅಂಗವನ್ನು ಪ್ರವೇಶಿಸುವ ಕ್ರಿಯೆಯನ್ನು ಅಂಗಸಂಗ ಸಂಬಂಧವೆನ್ನಲಾಗುತ್ತದೆ ಇದನ್ನು ವಚನದಲ್ಲಿ "ಕಂಗಳ ಬೆಳಗಿನಲ್ಲಿ ಮಂಗಳದ ಮಹಾಬೆಳಗಿ ರುತಿರಲು, ಇದ ಅಂಗವಿಸಿ ನೋಡಿ,ಎರಡರ ಸಂಗಸುಖವ ನೊಂದುಗೂಡಿ" ಎನ್ನಲಾಗಿದೆ. ಈ ಹಂತದಲ್ಲಿ ಅಂಗ ಭಾವವು ಕ್ರಮೇಣ ಕರಗಿ ಹೋಗುತ್ತದೆ, ಅಂಗವೇ ಲಿಂಗವಾಗಿ ಸಂಗದ ಸುಖದಲ್ಲಿ ತೇಲಿ ಹೋದ ಅನುಭವ ಸಾಧಕನಿಗೆ ಆಗುತ್ತದೆ. ಅದು ವರ್ಣನಾತೀತ ಅನುಭಾವ. ಅದು ಅತ್ಯಂತ ಕ್ಷಣಿಕವಾದ ಮಿಂಚಿ ಮರೆಯಾಗುವ ಕ್ಷಣದಲ್ಲಿ ಘಟಿಸುವ ಘಟನೆ. ಮಹಾಲಿಂಗವೇ ತಾನೆಂಬ ಅರಿವಿನೊಂದಿಗೆ ಮರಳು ಪ್ರಕ್ರಿಯೆಯನ್ನು ಅತ್ಯಂತ ಮನೋಜ್ಞವಾಗಿ ಇಲ್ಲಿ ವಿವ–ರಿಸಲಾಗಿದೆ."ನಿಮ್ಮೊಳು ಒಂದಾದ ಲಿಂಗೈಕ್ಯವನರಿದು,ಕಣ್ದೆರೆದು ಕರಗಿ ಆಲಿ ನೀರಾದಂತಾದೆನಯ್ಯಾ" ಕಠಿಣವಾದ ಮಂಜುಗಡ್ಡೆ ಕರಗಿ ನೀರಾಗುವಂತೆ ಅಂಗ ಲಿಂಗ ಸಂಬಂಧವನ್ನು ವಿವರಿಸಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ದೇವೇಗೌಡರ ಭೇಟಿಯಾಗಿ ಚರ್ಚಿಸಿದ ಆರ್.ಅಶೋಕ್



ಬೆಂಗಳೂರು: ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಮಂತ್ರಿ ಹೆಚ್‌ಡಿ. ದೇವೇಗೌಡ ಅವರನ್ನು ಭಾನುವಾರ ಭೇಟಿ ಮಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಕೇಸ್ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವೇಗೌಡ ಅವರೊಂದಿಗೆ ರಾಜ್ಯದ ರಾಜಕೀಯ ಬೆಳವಣಿಗೆ ಕುರಿತು ಚರ್ಚಿಸಿದೆ. ರಾಜ್ಯದಲ್ಲಿ ಕೊಲೆ, ಕಳ್ಳತನ,ದರೋಡೆ ಹೆಚ್ಚಾಗಿದೆ. ಮಳೆ ಸುರಿಯುವುದಕ್ಕಿಂತ ಹೆಚ್ಚಾಗಿ ಕೊಲೆಗಳು ನಡೆಯುತ್ತಿವೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೌಡಿಗಳಿಗೆ, ಕೊಲೆಗಡುಕರಿಗೆ ಹಬ್ಬ. ಈ ಹಬ್ಬಕ್ಕೆ ಕಾಂಗ್ರೆಸ್ಸೇ ನೇರ ಕಾರಣ. ಇತ್ತೀಚೆಗೆ ಹತ್ಯೆಯಾದ ಅಂಜಲಿ ಕುಟುಂಬದವರು ಕೊಲೆಗಾರರನ್ನು ಗಲ್ಲಿಗೇರಿಸಬೇಕು ಎಂದು ಹೇಳಿದ್ದಾರೆ. ಆದರೆ, ರಾಜ್ಯ ಸರ್ಕಾರವೇ □□ಪರಾಧಿ ಸ್ಥಾನದಲ್ಲಿದ್ದು, ಸರ್ಕಾರವನ್ನೇ ಗಲ್ಲಿಗೇರಿಸಬೇಕು ಎಂದು ಕಿಡಿಕಾರಿದರು.

ಪೆನ್‌ಡ್ರೈವ್ ವಿಚಾರದಲ್ಲಿ ದೇವರಾಜೇಗೌಡ ಸತ್ಯವನ್ನೇ ಹೇಳಿದ್ದಾರೆ. ಎಚ್.ಡಿ.ಕುಮಾರಸ್ವಾಮಿ ಪೈನ್‌ಡ್ರೈವ್ ಬಿಡುಗಡೆ ಮಾಡಿದರು ಎಂದು ಸುಳ್ಳು ಹೇಳುವುದಕ್ಕಾಗಿ ಡಿ.ಕೆ.ಶಿವಕುಮಾರ್ ಅಮಿಷ ಒಡ್ಡಿರುವ ವಿಚಾರದಲ್ಲಿ ಸತ್ಯವಿದೆ. ನಿಜ ಇರುವುದಕ್ಕೆ ದಾಖಲೆ ಬಿಡುಗಡೆ ಮಾಡಿದ್ದಾರೆ. ಅದಕ್ಕಾಗಿ ಬಂಧನವಾಗಿದೆ. ಮಾಧ್ಯಮಗಳಲ್ಲಿ ಸತ್ಯ ಸಂಗತಿ ಪ್ರಸಾರ ಆಗುವುದನ್ನು ತಡೆಯುವ ಉದ್ದೇಶ ಶಿವಕುಮಾರ್ ಅವರದರು ಎಂದು ಹೇಳಿದರು.

ಸುರ್ಜೇವಾಲ, ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ ಸೇರಿ ಮಾಸ್ಟರ್ ಪ್ಲಾನ್ ಮಾಡಿದ್ದಾರೆ. ಸಿದ್ದರಾಮಯ್ಯ ಈಗಾಗಲೇ ದಲಿತ ನಾಯಕರನ್ನು ಮುಗಿಸಿದ್ದಾರೆ. ಅದೇ ರೀತಿಯಲ್ಲಿ ಒಕ್ಕಲಿಗರನ್ನು ಮುಗಿಸಲು ಯೋಜನೆ ರೂಪಿಸಿದ್ದಾರೆ. ಪ್ರಜ್ವಲ್ ರೇವಣ್ಣ ಅವರ ಪ್ರಕರಣವನ್ನು ಸಿಬಿಐಗೆ ವಹಿಸಬೇಕಿದೆ. ಸಿಬಿಐ ಬಳಿ ಹೋದರೆ ಸರ್ಕಾರದಲ್ಲಿ ಇರುವವರೇ ಕಂಬಿ ಎಣಿಸಬೇಕಾಗುತ್ತದೆ. ಇಡೀ ಗೃಹ ಇಲಾಖೆಯನ್ನು ಯಾರೋ ಹೈಜಾಕ್ ಮಾಡಿ ನಡೆಸುತ್ತಿದ್ದಾರೆ. ಮಾಜಿ ಸಚಿವ ರೇವಣ್ಣ ಅವರನ್ನು ಬಂಧಿಸಿದಂತೆ ಚಾಲಕನನ್ನು ಈವರೆಗೆ ಬಂಧಿಸಿಲ್ಲ. ಪೊಲೀಸರು ಕಾಂಗ್ರೆಸ್ ನಾಯಕರು ಹೇಳಿದಂತೆ ಕೇಳುತ್ತಾರೆ ಎಂದು ತಿಳಿಸಿದ್ದಾರೆ.

ಪ್ರಜ್ವಲ್ ರೇವಣ್ಣ ವಿರುದ್ಧ ಸರ್ಕಾರ ಕ್ರಮಕೈಗೊಳ್ಳಲಿ. ಆದರೆ, ವಿಡಿಯೊ ಹಂಚಿದವರ ವಿರುದ್ಧ ಕ್ರಮ ವಹಿಸಿಲ್ಲ. ಹೀಗೆ ಕಾಂಗ್ರೆಸ್ ಕಣ್ಣಾ ಮುಚ್ಚಾಲೆ ಆಡುತ್ತಿದೆ. ಪ್ರಕರಣ ಮುಚ್ಚಿ ಹಾಕಲು ಎಸ್‌ಐಟಿ ಸಿದ್ಧತೆ ಮಾಡುತ್ತಿದೆ ಎಂದು ಆರೋಪಿಸಿದರು.

## ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಮಾತೇ ಇಲ್ಲ: ಸಿಎಂ



ಬೆಂಗಳೂರು: ಗ್ಯಾರಂಟಿ ಯೋಜನೆಗಳಿಗಾಗಿ 52,009 ಕೋಟಿ ರೂಪಾಯಿ ಹಣವನ್ನು ಮೀಸಲಿಟ್ಟಿದ್ದೇವೆ. ಲೋಕಸಭೆ ಚುನಾವಣೆ ಬಳಿಕ ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳಲಿವೆ ಎಂಬುವುದು ಬಿಜೆಪಿಯ ಅಪ್ಪಟ ಸುಳ್ಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಒಂದು ವರ್ಷ ಪೂರೈಸಿದ ಹಿನ್ನೆಲೆ ಬೆಂಗಳೂರು ಪ್ರೆಸ್ ಕ್ಲಬ್ ಆಯೋಜಿಸಿದ್ದ ಮಾಧ್ಯಮ ಸಂವಾದದಲ್ಲಿ ಮಾತನಾಡಿದ ಸಿಎಂ, "ನಮ್ಮ ಸರ್ಕಾರ ಬಂದು ಇಂದಿಗೆ ಒಂದು ವರ್ಷ ತುಂಬಿದೆ. ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಸಂಭ್ರಮಾಚರಣೆ ನಡೆಸಲು ಆಗಿಲ್ಲ. ನಮ್ಮ ಸರ್ಕಾರವನ್ನು ಒಂದು ವರ್ಷಗಳ ಕಾಲ ಯಶಸ್ವಿಯಾಗಿ ಮುನ್ನಡೆಸಿದ ರಾಜ್ಯದ ಏಳು ಕೋಟಿ ಕನ್ನಡಿಗರಿಗೆ ತುಂಬು ಹೃದಯದ ಧನ್ಯವಾದಗಳು" ಎಂದರು.

"ಅಭದ್ರತೆಯು ಆತಂಕ ಇರಲೇಬಾರದೆಂದು ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸ ಇಟ್ಟು ಸ್ಪಷ್ಟವಾದ ಬಹುಮತವನ್ನು ಕೊಟ್ಟು ಸರ್ಕಾರ ರಚನೆಗೆ ಅವಕಾಶ ಮಾಡಿ ಕೊಟ್ಟಿದ್ದೀರಿ. ರಾಜ್ಯದ ಮತದಾರರ ಪ್ರಜ್ಞಾವಂತಿಕೆ, ಅವರ ವಿಶ್ವಾಸವನ್ನು ನಾವು ಕಳೆದುಕೊಳ್ಳುವುದಿಲ್ಲ" ಎಂದು ತಿಳಿಸಿದರು.

"ಬಿಜೆಪಿಯು ನಿರಂತರ ಅಪಪ್ರಚಾರದ ನಡುವೆಯೂ ಗ್ಯಾರಂಟಿಗಳು ಜನರ ಮನೆ ಮನೆಗೆ ತಲುಪಿವೆ. ಗ್ಯಾರಂಟಿಗಳ ಹೊರತಾಗಿ ಅಭಿವೃದ್ಧಿಗೂ ಹಣ ಮೀಸಲಿಟ್ಟು ಖರ್ಚು ಮಾಡಿದ್ದೇವೆ. ಪ್ರಮಾಣವಚನ ಸ್ವೀಕರಿಸಿದ ದಿನದಿಂದಲೇ ಚುನಾವಣೆಯಲ್ಲಿ ಕೊಟ್ಟ ಆಶ್ವಾಸನೆ, ಗ್ಯಾರಂಟಿಗಳ ಜಾರಿಗೆ ಕ್ರಮ ತೆಗೆದುಕೊಂಡು ಐದಕ್ಕೆ ಐದೂ ಜಾರಿ ಮಾಡಿದ್ದೇವೆ" ಎಂದು ಸಿಎಂ ಹೇಳಿದರು.

"ಅನ್ನಭಾಗ್ಯ ಯೋಜನೆಗೆ ನಾವು ಹಣ ಕೊಟ್ಟರೂ, ಅಕ್ಕಿ ಕೊಡದೆ ಕೇಂದ್ರ ಸರ್ಕಾರ ಸತಾಯಿಸಿತು. ಅಕ್ಕಿ ಸಂಗ್ರಹ ಇದ್ದರೂ ಕೊಡಲಿಲ್ಲ. ಅಕ್ಕಿ ಕೊಡದೆ ಇರಲು ಮೇಲಿನಿಂದ ಆದೇಶ ಇದೆ ಎಂದು

4ನೇ ಪುಟಕ್ಕೆ

### 5 ನೇ ದಿನಕ್ಕೆ ಕಾಲಿಟ್ಟ ಜಂಬಗಿ(ಆ), ಹುಣಶ್ಯಾಳ(ಮಾದಾಳ) ಕೆರೆ ನೀರು ತುಂಬಿಸುವ ಸತ್ಯಾಗ್ರಹ

## ಮೇ.22ರಂದು ಜಿಲ್ಲಾಧಿಕಾರಿ ಕಛೇರಿ ಮುತ್ತಿಗೆಗೆ ಕರೆ

**ಉದಯರಶ್ಮಿ ನ್ಯೂಸ್**

ವಿಜಯಪುರ : ಜಂಬಗಿ (ಆ), ಮಾದಾಳ, ಹುಣಶ್ಯಾಳ ಕೆರೆಗೆ ನೀರು ಹರಿಸಬೇಕೆಂದು ಕಳೆದ 4 ದಿನಗಳಿಂದ ನಡೆಯುತ್ತಿರುವ ಅನಿರ್ಧಿಷ್ಟ ಧರಣಿ ಸತ್ಯಾಗ್ರಹವು ಸೋಮವಾರ 5ನೇ ದಿನಕ್ಕೆ ಕಾಲಿಡಲಾಗಿದೆ. ಜಿಲ್ಲಾಡಳಿತ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸಾಕಷ್ಟು ಬಾರಿ ಮನವಿ ಸಲ್ಲಿಸಿದರೂ ಇಲ್ಲಿಯವರೆಗೆ ಕೆರೆ ನೀರು ತುಂಬದಿರುವ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಕರ್ನಾಟಕ



ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರೈತರೊಂದಿಗೆ ಹೋರಾಟ ನಡೆಸುತ್ತಿದ್ದು, ಕೂಡಲೇ ನೀರು ಹರಿಸಬೇಕು ಇಲ್ಲ ಹೋರಾಟ ನಿಲ್ಲಿಸುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ.

ರೈತ ಸಂಘದ ವಿಜಯಪುರ ತಾಲೂಕಾ ಉಪಾಧ್ಯಕ್ಷ ಪ್ರಕಾಶ ತೇಲಿ ಅವರು ಮಾತನಾಡುತ್ತಾ ಜಂಬಗಿ ಕೆರೆಗೆ ನೀರು ತುಂಬಿಸಬೇಕು, ಇಲ್ಲವಾದಲ್ಲಿ ಬುಧವಾರದಂದು ನೂರಾರು ರೈತರೊಂದಿಗೆ ಜಿಲ್ಲಾಧಿಕಾರಿಗಳ ಕಛೇರಿ ಮುತ್ತಿಗೆ ಹಾಕಿ ಜಂಬಗಿ ಕೆರೆಗೆ ನೀರು ತುಂಬಿಸಬೇಕು ಎಂದು ಆಗ್ರಹಿಸುತ್ತೇವೆ. ನೀರು ಹರಿಸುವವರೆಗೂ ಅಲ್ಲಿಯೇ ಕುಳಿತು ಮಕ್ಕಳು, ಮಹಿಳೆಯರು ಹಾಗೂ ಧನಕರುಗಳೊಂದಿಗೆ ಧರಣಿ ಸತ್ಯಾಗ್ರಹ ಮಾಡಲಾಗುವುದು ಎಂದರು.

ಆಹೇರಿ ಗ್ರಾ.ಪಂ ಮಾಜಿ ಅಧ್ಯಕ್ಷರಾದ ಬಸವರಾಜ ಗಾಣಗೇರ ಅವರು ಮಾತನಾಡುತ್ತಾ, ಕೆರೆಗೆ ನೀರು ಹರಿಸಬೇಕೆಂದು ಈಗಾಗಲೇ ಸಾಕಷ್ಟು ಭಾರಿ ಮನವಿ ನೀಡಲಾಗಿದ್ದು, ಅಧಿಕಾರಿಗಳು ಅಲ್ಲಲ್ಲಿ ನೀರು ಸಾಕಷ್ಟು ಪೋಲಾಗುತ್ತಿದ್ದು, ಅವುಗಳನ್ನು ಬಂದ್ ಮಾಡಿದರೆ ನೇರವಾಗಿ ಜಂಬಗಿ ಕೆರೆಗೆ ನೀರು ಬರುವುದರಲ್ಲಿ ಸಂಶಯವಿಲ್ಲ, ಆದರೆ ಅಧಿಕಾರಿಗಳ ಬೇಜವಾಬ್ದಾರಿಯಿಂದಾಗಿ ಮಧ್ಯದಲ್ಲಿ ನೀರು ಪೋಲಾಗುತ್ತಿದೆ, ಕೂಡಲೇ ಅಧಿಕಾರಿಗಳು ಅದನ್ನು ಬಂದ್ ಮಾಡಿಸಬೇಕು, ಆದ–ರೆ ಪ್ರಭಾವಿಗಳು ತಮ್ಮ ಪ್ರಭಾವದಿಂದ ನೀರು ಬೀಡಿಸಿಕೊಳ್ಳುತ್ತಿದ್ದಾರೆ, ಇದನ್ನು ನಿಲ್ಲಿಸಬೇಕಾದ ಅಧಿಕಾರಿಗಳು ಸಬೂಬ ಹೇಳುತ್ತಾ ವೇಳೆ ಹಾಳು ಮಾಡುತ್ತಿದ್ದಾರೆ, ಅಂತವರ ವಿರುದ್ಧ ಕೂಡಲೇ ಕ್ರಮ ಕೈಕೊಂಡು ನೀರು ಹರಿಸಬೇಕು ಎಂದು ಆಗ್ರಹಿಸಿದರು.

ಹಿರಿಯ ರೈತ ಹೋರಾಟಗಾರರಾದ ಗುರಪ್ಪ ಸೋಂಪುರ ಮಾತನಾಡುತ್ತಾ, ಜಂಬಗಿ ಸಮೀಪದ ಹುಣಶ್ಯಾಳ (ಮಾದಾಳ) ಕೆರೆಯೂ ಒಮ್ಮೆಯೂ ತುಂಬಿಲ್ಲ, ಈ ಕೆರೆಯನ್ನು ಅಧಿಕೃತವಾಗಿ ಕೆರೆ ನೀರು ತುಂಬುವ ಯೋಜನೆ ಯಡಿ ಸೇರಿಸಿ, ನೀರು ತುಂಬಿದರೆ ಈ ಭಾಗದ ಸಾಕಷ್ಟು ರೈತರಿಗೆ ಜನ ಜಾನುವಾರುಗಳಿಗೆ ಕುಡಿಯಲು ನೀರಿನ ಅನುಕೂಲವಾಗುವುದು ಎಂದರು

ಈ ವೇಳೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ, ವಿಜಯಪುರ ತಾಲೂಕಾ ಉಪಾಧ್ಯಕ್ಷ ಮಹಾದೇವಪ್ಪ ತೇಲಿ, ಜಿಲ್ಲಾ ಸಂಚಾಲಕರಾದ ರಾಮನಗೌಡ ಪಾಟೀಲ, ಮಹಿಬೂಬ ಬಾಷಾ ಮನಗೂಳಿ, ಚನ್ನಪ್ಪ ತೇಲಿ, ಭೀಮಶಂಕರ ರಜಪೂರ, ಚನ್ನಪ್ಪ ವಾಡೇದ, ಸಿದ್ದು ತೇಲಿ, ಬಸವರಾಜ ಗುದಳೆ, ಸದಾಶಿವ ಕೊಣಸಿರಸಗಿ, ಸಂಗಮೇಶ ತೇಲಿ, ಪ್ರಭು ಕಾರಜೋಳ, ಸಾಯಬಣ್ಣ ಸಮಗೊಂಡ, ಕರೆಪ್ಪ ಸೋಲಾಪುರ, ಬಸವರಾಜ ಮಸಳಿ, ಸುಭಾಸ ಪೂಜಾರಿ, ಚನ್ನಪ್ಪ ಜಮಖಂಡಿ, ಸಂಗಮೇಶ ಜಮಖಂಡಿ, ಶ್ರೀಶೈಲ ದಿನ್ನಿ, ಪಾಂಡು ಗೊರನಾಳ, ಸಿದ್ದು ಕಾಪಸೆ, ಶ್ರೀಶೈಲ ಸಾಲಿ, ಅಮಿತ ಡಿಗ್ಗಾವಿ, ರಾಕೇಶ ಡೋಣೂರ, ರಾಮುಸಿಂಗ ರಜಪೂತ, ಅನಮೇಶ ಜಮಖಂಡಿ, ಮಲ್ಲಿಕಾರ್ಜುನ ಬಳವಲ, ಬಸವರಾಜ ಹಡಪದ, ಮುತ್ತು ಕಂಬಾರ, ಯಲ್ಲಪ್ಪ ನಿವಳಖೇಡ, ಆದಮಸಾಬ ಡೋಣೂರ, ಶಿವಪದ್ಮಾ ತೋರವಿ, ಸೇರಿದಂತೆ ಅನೇಕರು ಇದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತಸಂಘ ಮನವಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ತಾಲ್ಲೂಕಿನಲ್ಲಿ ರೈತರಿಗೆ ಬೆಳೆ ವಿಮೆ, ತೊಗರಿ ನೆಟೆ ರೋಗ, ಬರಗಾಲ ಪರಿಹಾರ ನೀಡುವುದು, ಜಮೀನುಗಳಿಗೆ ಸುಗಮ ದಾರಿ, ವೃದ್ಧರ ಪಿಂಚಣಿ ಸಮಸ್ಯೆಗಳಿಗೆ ಪರಿಹಾರ ಸೇ–ರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತಸಂಘ ಹಾಗೂ ಹಸಿರುಸೇನೆಯ ಪದಾಧಿಕಾ–ರಿಗಳು ಶಿರಸ್ತೇದಾರ ಡಿ.ಎಸ್.ಭೋವಿ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯಕ್ಕೆ ಸೋಮವಾರ ಆಗಮಿಸಿದ ರಾಜ್ಯ ರೈತಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮಾತನಾಡಿ, ತಾಲ್ಲೂಕಿನ ಎಲ್ಲ ಹಳ್ಳಿಗಳಲ್ಲಿ ಮುಂಗಾರು ಹಾಗೂ ಹಿಂಗಾರು ಬೆಳೆ ಬಾರದೆ ಹಾನಿಗೊಳಗಾದ ರೈತರಿಗೆ ರಾಜ್ಯ ಹಾಗೂ ಕೇಂದ್ರದಿಂದ ಪ್ರತಿ ಹೆಕ್ಟರಿಗೆ 8500 ರೂ. ಹಾಗೂ 8500 ರೂ. ರಂತೆ ಒಟ್ಟು 17000 ರೂ. ಪರಿಹಾರ ನೀಡಬೇಕಾಗಿತ್ತು. ಆದರೆ



ರಾಜ್ಯಸರ್ಕಾರ ಮಾತ್ರ ಕೇಂದ್ರದ ಹಣದಲ್ಲಿ 2000 ರೂ. ಮುರಿದು ಹೆಕ್ಟರ್‌ಗೆ 6500 ರೂ. ನೀಡುತ್ತಿದೆ. ತೊಗರಿ ನೆಟೆರೋಗದ ಪರಿಹಾರ ಕೇವಲ 4200 ರೂ.ನೀಡಿದ್ದು ಉಳಿದ ಬಾಕಿ ಹಣ ನೀಡಬೇಕಾಗಿದೆ ಎಂದರು.

ಜಿಲ್ಲಾ ಉಪಾಧ್ಯಕ್ಷ ಸಂಪತ್ ಜಮಾದಾರ ಮಾತನಾಡಿ, ಫಸಲು ಭೀಮಾಯೋಜನೆಯಡಿ ಸಾಕಷ್ಟು ಅವ್ಯವಹಾರ ನಡೆಯುತ್ತಿದೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದರು.

ತಾಲ್ಲೂಕು ಗೌರವಾಧ್ಯಕ್ಷ ಶಿವಾನಂದಯ್ಯ ಹಿರೇಮಠ, ಸಿ.ಎಸ್.ಪ್ಯಾಟಿ, ಅಪ್ಪಾಸಾಹೇಬ ಹರವಾಳ (ಮಣೂರ), ಚನ್ನಪ್ಪ ಕಾರಜೋಳ(ನಿವಾಳಖೇಡ), ಸುನಂದಾ ಸೊನ್ನಳ್ಳಿ ಮಾತನಾಡಿ, ರೈತರ ಜಮೀನುಗಳ ರಸ್ತೆಯಲ್ಲಿ ಕಂಟಿ ಕಡೆಸಿ ಸುಗಮಗೊಳಿಸುವುದು, ವೃದ್ಧರ ಪಿಂಚಣಿ ಸರಿಯಾಗಿ ಬರಲು ಕ್ರಮವಹಿಸುವುದು, ನಿಂಬೆಗೆ ಬೆಂಬಲ ಬೆಲೆ ದೊರಕಿಸುವುದು ಹಾಗೂ ಹಳ್ಳಗಳಿಗೆ ನೀರು ಹರಿಸಲು ಕ್ರಮವಹಿಸುವ ಕುರಿತು ಆಗ್ರಹಿಸಿ ನಂತರ ಮನವಿ ಸಲ್ಲಿಸಿದರು.

ರೈತ ಸಂಘದ ತಾಲೂಕಾಧ್ಯಕ್ಷ ಈರಪ್ಪ ಕುಳೇಕುಮಟಗಿ, ಮಲ್ಲನಗೌಡ ಬಿರಾದಾರ, ರುದ್ರಯ್ಯ ಹಿರೇಮಠ, ಬಾಬು ಬಾಗವಾನ, ಶಂಕರಗೌಡ ಹೊಸಗೌಡರ, ಶಕೀರಾ ಹೆಬ್ಬಾಳ, ಸಾಯಬ್ಬಿ ತಾಂಬೋಳಿ, ಜಾಯಿದಾ ಕೋರಬು, ವಿಠ್ಠಲ ಮರಾಠೆ, ಅಶೋಕ ನಾಯ್ಕೋಡಿ, ನೀಲು ಚವ್ಹಾಣ, ಸುಭಾಸ ಸಜ್ಜನ, ರಾಮು ಮೆಟಗಾರ, ಬಶೀರ್‌ಅಹ್ಮದ್ ಯಲಗಾರ, ರೂಪಸಿಂಗ್ ರಾಠೋಡ, ಮಾಳಪ್ಪ ಮೆಟಗಾರ, ಭೀಮರಾಯ ಕಲಕೇರಿ ಇದ್ದರು.

# ಮಣ್ಣು ತಪಾಸಣೆ ಕೇಂದ್ರ ಉದ್ಘಾಟನೆ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ಯರಗಲ್ಲ ಗ್ರಾಮದ ಬಾಲಾಜಿ ಶುಗರ್ಸ್ ಮತ್ತು ಕೆಮಿಕಲ್ಸ್ ಅಡಿ ಎಬಿ ಬಯೋಕ್ರಾಪ್ ಕಂಪನಿಯಲ್ಲಿ ಮಣ್ಣು ತಪಾಸಣೆ ಕೇಂದ್ರವನ್ನು ಉದ್ಘಾಟನೆ ಮಾಡಲಾಯಿತು.



ರಸಸಾರ, ಲವಣಾಂಶ, ಸಾವಯವ ಇಂಗಾಲ, ಸಾರಜನಕ, ರಂಜಕ, ಗಂಧಕ, ಪ್ಪೋಟ್ಯಾಷ, ಸತು, ಕಬ್ಬಿನಾಂಶ, ತಾಮ್ರ, ಮ್ಯಾಂಗನೀಸ್, ಬೋರಾನ್ ಈ ಎಲ್ಲ ರೀತಿಯ ಪೋಷಕಾಂಶಗಳನ್ನು ಪರೀಕ್ಷಿಸಿ ಮಣ್ಣಿನಲ್ಲಿ ಪೋಷಕಾಂಶದ ಕೊರತೆ ಕಂಡು ಬಂದಲ್ಲಿ ಅದಕ್ಕೆ ಸೂಕ್ತವಾದ ಗೊಬ್ಬರವನ್ನು ಒದಗಿಸುವುದಾಗಿ ಕಂಪನಿಯ ಹಣಮಂತಗೌಡ ಪಾಟೀಲ, ಅಧಿಕ ಪಾಟೀಲ, ಪ್ರಜ್ವಲ ಪಾಟೀಲ, ಶ್ರೀನಿವಾಸ ಅರಕೇರಿ, ನಾಗರಾಜ ಎನ್ ತಿಳಿಸಿದ್ದಾರೆ.

# ರಸ್ತೆ ಮೇಲೆ ಚರಂಡಿ ಗಲೀಜು ; ಸಾರ್ವಜನಿಕರ ಸಂಚಾರಕ್ಕೆ ಸಂಚಕಾರ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಬಿಸಿಲಿನ ಧಗೆಗೆ ಬೇಸತ್ತ ಪಟ್ಟಣದ ಜನತೆಗೆ ರವಿವಾರ ಮಳೆರಾಯ ಕೊಂಚ ನೆಮ್ಮದಿ ನೀಡಿದ್ದಾನೆ. ಸುಮಾರು ಒಂದು ತಾಸು ಸಿಡಿಲು, ಗುಡುಗು ಸಮೇತ ಬಿಡದೇ ಸುರಿದ ಮಳೆ ಒಂದೆಡೆ ಭೂಮಿಯನ್ನು ತಂಪು ಮಾಡಿದರೆ, ಇನ್ನೊಂದೆಡೆ ಮಾರುತಿ ನಗರದ ಮುಖ್ಯ ಚರಂಡಿಯಲ್ಲಿದ್ದ ಹೊಲಸೆಲ್ಲ ರಸ್ತೆಯ ಮೇಲೆ ಬಂದು ಗಬ್ಬು ವಾಸನೆ, ತಿರುಗಾಡಲು ಸಾಧ್ಯವಾಗದೇ ಸಾರ್ವಜನಿಕರು ಪರದಾಡಿದ ಘಟನೆಯೂ ನಡೆಯಿತು.

ಕಾಲ ಕಾಲಕ್ಕೆ ಚರಂಡಿಂ–ಯಲ್ಲಿನ ಹೊಲಸು ಸ್ವಚ್ಚಗೊಳಿಸದ ಪರಿಣಾಮ ಮಳೆಯಾದರೆ ಸಾಕು ಎಲ್ಲ ಕಸ ಆಚೆ ಬಂದು ರಸ್ತೆಯಲ್ಲಿ ನಿಂತು ಜನತೆಗೆ ತೊಂದರೆ ಮಾಡಿದೆ ಎಂದು ಕೆಲ ಸಾರ್ವಜನಿಕರು



ಪುರಸಭೆಯ ಮೇಲೆ ಹರಿಹಾಯ್ದರೆ, ಬಿಜೆಪಿ ಮುಖಂಡ ಸಿದ್ಧರಾಜ ಹೊಳಿ ತಮ್ಮ ಮನೆ ಎದುರು ತಿರುಗಾಡಲು ಬಾರದಷ್ಟು ನೀರು ನಿಂತಿದ್ದು ಇದಕ್ಕೆ ನಿಯಮ ಬಾಹಿರ ಯುಜಿಡಿ ಕಾಮಗಾರಿ ಮತ್ತು ಸುಮಾರು ವರ್ಷಗಳಿಂದ ಮನೆ ಕಟ್ಟದೇ ಖಾಲಿ ಇರುವ ಪ್ಲಾಟ್‌ಗಳು ಕಾರಣ ಎಂದು ಆರೋಪಿಸಿದರು. ಕೂಡಲೇ ಮನೆ ಕಟ್ಟದೇ ಖಾಲಿ ಬಿಟ್ಟಿರುವ ಪ್ಲಾಟ್ ನ ಮಾಲೀಕ–ರಿಗೆ ಪುರಸಭೆ ನಿಯಮಾವಳಿಗಳ ಪ್ರಕಾರ ದಂಡ ವಿಧಿಸಿ, ನೀರು ನಿಲ್ಲದಂತೆ ಸೂಕ್ತ ಕ್ರಮ ವಹಿಸಬೇಕು ಎಂದು ಪುರಸಭೆ ಅಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

# ನಿಯಂತ್ರಣ ತಪ್ಪಿದ ದ್ವಿಚಕ್ರ ವಾಹನ :ಸವಾರ ಸಾವು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ನಿಯಂತ್ರಣ ತಪ್ಪಿದ ದ್ವಿಚಕ್ರ ವಾಹನ ಸವಾರನೋರ್ವ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ತಾಲೂಕಿನ ಕವಡಿಮಟ್ಟಿ ಗ್ರಾಮದ ಹಳ್ಳದ ಬಳಿ ಶನಿವಾರ ರಾತ್ರಿ 11ಗಂಟೆ ಸುಮಾರು ಸಂಭವಿಸಿದೆ.

ಮೃತ ದುರ್ದೈವಿಯನ್ನು ಶಿವಾನಂದ ಭೀಮಪ್ಪ ದವಾಖಾನೆ(59) ಎಂದು ಗುರುತಿಸಲಾಗಿದೆ. ಈತ ಮುದ್ದೇಬಿಹಾಳದ ಬಾರ್ ಒಂದರ ಮ್ಯಾನೇಜರ್ ಆಗಿ ಸೇವೆ ಸಲ್ಲಿಸುತ್ತಿದ್ದ. ತನ್ನ ಹೋಂಡಾ ಶೈನ್ ದ್ವಿಚಕ್ರ ವಾಹನದಿಂದ ನಾಲತವಾಡದ ಕಡೆಯಿಂದ ಮುದ್ದೇಬಿಹಾಳ ಕಡೆಗೆ ಸವಾರಿ ಮಾಡುತ್ತಿರುವಾಗ ನಿಯಂತ್ರಣ ತಪ್ಪಿ ಬೈಕ್ ಸ್ಕಿಡ್ ಆಗಿ ಬಿದ್ದಿದ್ದು ಎದೆಗೆ ಜೋರಾಗಿ ಪೆಟ್ಟಾದ ಕಾರಣ ಸ್ಥಳದಲ್ಲೇ ಮೃತಪಟ್ಟಿರಬಹುದು ಎಂದು ಅಂದಾಜಿಸಲಾಗಿದೆ. ಘಟನಾ ಸ್ಥಳಕ್ಕೆ ಪಿಎಸ್‌ಐ ಸಂಜೀವ ತಿಪರೆಡ್ಡಿ ಭೇಟಿ



ನೀಡಿ ಪರಿಶೀಲಿಸಿ ಕಾನೂನು ಕ್ರಮ ಕೈಗೊಂಡಿದ್ದಾರೆ.

# ಜಿಲ್ಲಾಧ್ಯಕ್ಷರಾಗಿ ಬಸನಗೌಡ ಪಾಟೀಲ ನೇಮಕ

**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ವಿಜಯಪುರ ಜಿಲ್ಲಾಧ್ಯಕ್ಷರಾಗಿ ಸಿಂದಗಿ ತಾಲೂಕಿನ ಗೋಲಗೇರಿ ಗ್ರಾಮದ ಬಸನಗೌಡ ನರಸಪ್ಪ ಗೌಡ ಪಾಟೀಲ, ಜಿಲ್ಲಾ ಕಾರ್ಯದರ್ಶಿಯಾಗಿ ಗೊಲ್ಲಾಳಪ್ಪ ಅಂಗಡಿ, ಗೌರವ ಅಧ್ಯಕ್ಷರಾಗಿ ಭೀಮನಗೌಡ ದೊಡ್ಡಮನಿ (ವಂದಾಲ) ಅವರನ್ನು ನೇಮಕ ಮಾಡಲಾಗಿದೆ.



ಸಂಘದ ತತ್ವ ಸಿದ್ಧಾಂತಕ್ಕೆ ಬದ್ಧವಾಗಿ ಚಾಚು ತಪ್ಪದೆ ಪಾಲನೆ ಮಾಡಬೇಕು. ಕಾಯ ವಾಚ ಮನಸ್ಸು ಶುದ್ದವಾಗಿ ಕೆಲಸ ಮಾಡಬೇಕು.ಜತೆಗೆ ರೈತರ ಸಮಸ್ಯೆಗಳಿಗೆ ಸ್ಪಂದಿಸಿ ರೈತರಿಗೆ ನ್ಯಾಯ ದೊರಕಿಸಿ ಕೊಡುವ ಕೆಲಸ ಮಾಡಬೇಕು ಎಂದು ಕರ್ನಾಟಕ ರಾಜ್ಯದ ಕನಾ9ಟಕ ರಾಜ್ಯ ರೈತ ಸಂಘದ ಹಾಗೂ ಹಸಿರು ಸೇನೆ ಪ್ರಧಾನ ಕಾಯ9ದಶಿ9 ಅಮೀನ್ ಬಾಷಾ ದಿದ್ದಿಗಿ ಅವರು ಆದೇಶ ಹೊರಡಿಸಿದ್ದಾರೆ.

# ಕಲಿಕೆಗೆ ಶ್ರದ್ಧೆ ಮತ್ತು ಪರಿಶ್ರಮ ಮುಖ್ಯ :ಬಂಡೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿದ್ಯೆಗೆ ವಿನಯವೇ ಭೂಷಣವಾಗಿದ್ದು, ವಿದ್ಯಾರ್ಥಿಗಳು ಶ್ರದ್ಧಾಭಕ್ತಿಯಿಂದ ಕಲಿಯುವ ಜತೆಗೆ ಗುರು ಹಿರಿಯರನ್ನು ಗೌರವಿಸುವ ಸಂಸ್ಕಾರ ಬೆಳೆಸಿಕೊಳ್ಳಬೇಕು.

ಶಿಕ್ಷಣದಿಂದ ಸಾಧನೆ ಯಶಸ್ಸು ಪಡೆಯಲು ಸಾಧ್ಯ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಫೌಂಡೇಶನ್ ಅಧ್ಯಕ್ಷ ಸುನೀಲ ಜೈನಾಪುರ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಶಿಸ್ತು,ಸಂ–ಯಮ, ನಿಷ್ಠೆಯಿದ್ದರೆ ಮಾತ್ರ ವಿದ್ಯೆ ಒಲಿಯುತ್ತದೆ. ಶಿಸ್ತು ಮೈಗೂಡಿಸಿಕೊಂಡು ಸಮಯ



ಸಾಧ್ಯವಾಗಲಿದ್ದು, ಕಲಿಕೆಗೆ ಶ್ರದ್ಧೆ ಮತ್ತು ಪರಿಶ್ರಮ ಮುಖ್ಯ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ರವಿವಾರದಂದು ನಗರದ ಆಲಕುಂಟೆ ಬಡಾವಣೆಯ ಕನಕ ಕೋಚಿಂಗ್ ಕ್ಲಾಸ್ ನಲ್ಲಿ ಕರ್ನಾಟಕ ಕನಕದಾಸ ಶಿಕ್ಷಣ ಸಂಸ್ಥೆ ಹಾಗೂ ಭಾರತ ಯುವ ವೇದಿಕೆ ಚಾ–ರಿಟೇಬಲ್ ಫೌಂಡೇಶನ್ ವತಿಯಿಂದ ಹಮ್ಮಿಕೊಂಡ "ಮುದ್ದು ಮನಸ್ಸುಗಳಿಗೆ ವಿವೇಕದ ಮಾತುಗಳು–ವ್ಯಕ್ತಿತ್ವ ವಿಕಸನ" ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಜೀವನದ ಔನ್ನತ್ಯಕ್ಕೆ ಶಿಕ್ಷಣ ಮತ್ತು ಉತ್ತಮ ಸಂಸ್ಕಾರ ಬಹು ಮುಖ್ಯ. ಮಕ್ಕಳು ಆತ್ಮವಿಶ್ವಾಸ, ಬದ್ಧತೆ, ದಕ್ಷತೆ, ಸ್ಥಿರತೆ–ಈ ನಾಲ್ಕು ಅಂಶಗಳನ್ನು ತಮ್ಮ ಜೀವನದಲ್ಲಿ ಅನುಪಾಲಿಸಬೇಕು. ಕಠಿಣ ಪರಿಶ್ರಮದಿಂದ ಮಾತ್ರ ಪ್ರಜ್ಞೆಯಿಂದ ಕಲಿತರೆ ಸಾಧನೆ ಮಾಡುವುದು ಕಷ್ಟವಲ್ಲ. ಬದುಕಿನಲ್ಲಿ ಮಾನವೀಯತೆ ಹಾಗೂ ದೇಶಭಕ್ತಿ ರೂಢಿಸಿಕೊಂಡು ಸತ್ಪ್ರಜೆಗಳಾಗಬೇಕು ಎಂದು ಹೇಳಿದರು.

ಶಿಕ್ಷಕ ಸಂತೋಷ ಜಿಂಗಾಡೆ ಪ್ರಾಸ್ತಾವಿಕವಾಗಿ ಮಾತನಾಡಿ, ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ ಎಂಬಂತೆ ಬಾಲ್ಯದಿಂದಲೇ ಮಕ್ಕಳಿಗೆ ಜೀವನದ ಮೌಲ್ಯಗಳ ಅರಿವು ನೀಡಿ ಸುಸಂಸ್ಕೃತರನ್ನಾಗಿ ಬೆಳೆಸಬೇಕು ಎಂದು ಹೇಳಿದರು.

ಕರ್ನಾಟಕ ಕನಕದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಜಯಪ್ರಭು ಕೊಳಮಲಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯರಾದ ಮಹೇಶ ಪತ್ತಾರ, ಸಂಚಾಲಕ ರಾಮು ಕೆ, ಶಿಕ್ಷಕರಾದ ಶ್ರೀದೇವಿ, ಲಲಿತಾ ರಾಠೋಡ, ಮೌನೇಶ ಪತ್ತಾರ ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

# ಯಶಸ್ಸು ತ್ಯಾಗವನ್ನು ಕೇಳುತ್ತದೆ :ಕೋರಿ

**ಉದಯರಶ್ಮಿ ನ್ಯೂಸ್**

ಇಂಡಿ: ಪ್ರತಿ ವ್ಯಕ್ತಿಯಾಗಲಿ ಆಟಗಾರನಾಗಿರಲಿ ವಿದ್ಯಾರ್ಥಿಯಾಗಿರಲಿ ತನ್ನ ವಿದ್ಯಾರ್ಥಿ ಜೀವನದಲ್ಲಿ ಪ್ರತಿಶತ ನೂರಕ್ಕೆ ನೂರರಷ್ಟು ಫಲಿತಾಂಶ ಹೊಂದಿ ತೇರ್ಗಡೆಯಾಗಬೇಕಾದರೆ,ನಮ್ಮ ಬದುಕು ನಮ್ಮ ಸಂತೋಷ –ಸಂಭ್ರಮ ಪ್ರಯಾಣ ಪ್ರವಾಸ ನಿದ್ದೆ –ನೀರಡಿಕೆ ಬಂಧು–ಬಾಂಧವರೊಡನೆಯ ಒಡನಾಟ ಎಲ್ಲವನ್ನು ಕಸಿದುಕೊಳ್ಳುತ್ತದೆ. ಹಾಗಾಗಿ ಯಶಸ್ಸು ನಮಗೆ ತ್ಯಾಗಗಳಿಂದ ಸಿಗುತ್ತದೆ ಹೊರತು, ಅನಾಯಾಸವಾಗಿ ಅಲ್ಲ ಎಂದು ಸಾಹಿತಿ ದಶರಥ ಕೋರಿ ತಿಳಿಸಿದರು.



ಇಂದು ಇಡೀ ರಾಜ್ಯಕ್ಕೆ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಸರಕಾರಿ ಶಾಲೆಯ ವಿದ್ಯಾರ್ಥಿನಿ ಅಂಕಿತಾ ಕುಂಬಾರ ಅತೀ ಹೆಚ್ಚು ಅಂಕ ಪಡೆದು ಮನೆ ಮಾತಾಗಿದ್ದಾಳೆ. ಅವಳ ಸಾಧನೆಗೆ ಇಡೀ ರಾಜ್ಯ ಸಂತೋಷ ಪಟ್ಟಿದೆ. ಸರಕಾರ ಅವಳ ಪ್ರತೀಭೆಗೆ ಪ್ರೋತ್ಸಾಹ ಧನವಾಗಿ ಇಂದು ಲಕ್ಷಾಂತರ ಹಣ ನೀಡಿ ಗೌರವಿಸಿದೆ

ಸಾಧನೆ ಎನ್ನುವದು ಸಾಧಕನ ಸ್ವೊತ್ತು ಹೊರತು ಸೋಮಾರಿಯದಲ್ಲ ಎಂದು ಬೆಸ್ಟ್ ಕೋಚಿಂಗ್ ಕ್ಲಾಸಿನ ವಿದ್ಯಾರ್ಥಿಗಳ ಬಿಳ್ಕೋಡುವ ಸಮಾರಂಭದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಗಮನಾರ್ಹ ಸಾಧನೆ ಮಾಡಿದ ಹತ್ತು ವಿದ್ಯಾರ್ಥಿಗಳಿಗೆ ಸಂಸ್ಥೆಯ ವತಿಯಿಂದ ಸನ್ಮಾನ ಹಾಗೂ ಧನಸಹಾಯ ನೀಡಲಾಯಿತು.

ಈ ಸಂದರ್ಭದಲ್ಲಿ ಅತಿಥಿಗಳಾಗಿ ಸಂಗಮೇಶ ಧಾಮಾ ಅಶೋಕ ಬಿರಾದಾರ ಶಿಕ್ಷಕರು ಶ್ರೀ ಚೌಗಲೆ ಶಿಕ್ಷಕರು ಬಸವರಾಜ ಪಲ್ಲೇದ ಶಿಕ್ಷಕರು ದಯಾನಂದ ಝುಂಪಾ ಶಿಕ್ಷಕರು ರಶ್ಮಿ ಕರಿಗಣ್ಣವರ ಶಿಕ್ಷಕಿ ಉಪಸ್ಥಿತರಿದ್ದರು.

# ಇಂದಿನ ಸತ್ಕಾರ ಮುಂದಿನ ಕಲಿಕೆಗೆ ಪ್ರೇರಣೆ :ಮಹಾಲಿಂಗ



**ಉದಯರಶ್ಮಿ ನ್ಯೂಸ್**

ಚಿಮ್ಮಡ: ಇಂದಿನ ಸಾಧಕ ವಿದ್ಯಾರ್ಥಿಗಳ ಸತ್ಕಾರ, ಮುಂದಿನ ವಿದ್ಯಾರ್ಥಿಗಳಿಗೆ ಗುರಿ ತಲುಪಲು ಪ್ರೇರಣೆಯಾಗಲಿದೆ ಎಂದು ಗ್ರಾ.ಪಂ. ಸದಸ್ಯ ಮಹಾಲಿಂಗ ಮಾಯಣ್ಣವರ ಹೇಳಿದರು.

ಗ್ರಾಮದ ಶ್ರೀ ಕರಿಸಿದ್ದೇಶ್ವರ ದೇವಸ್ಥಾನದಲ್ಲಿ ಶನಿವಾರ ರಾತ್ರಿ ಹಮ್ಮಿಕೊಳ್ಳಲಾಗಿದ್ದ ಸಾಧಕ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಸತ್ಕರಿಸಿ ಮಾತನಾಡಿದ ಅವರು ಪ್ರತಿಯೊಬ್ಬರ ಬದುಕು ರೂಪಿಸುವುದೇ ಶಿಕ್ಷಣವಾಗಿದ್ದು ತಮ್ಮ ಗುರಿ ಮುಟ್ಟುವವರೆಗೆ ವಿಶ್ರಮಿಸದೆ ಸತತ ಅದ್ಯಯನ ಕಠಿಣ ಪರೀಶ್ರಮದ ಮೂಲಕ ಮುಂದಿನ ಶಿಕ್ಷಣಕ್ಕೆ ಅಣಿಯಾಗುವುದರೊಂದಿಗೆ ಮುಂದಿನ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಬೇಕಾಗಿದೆ ಎಂದರು.

ಗ್ರಾಮದ ಸರಕಾರಿ ಪದವಿಪೂರ್ವ ವಿದ್ಯಾಲಯದ ಪಿಯುಸಿಯಲ್ಲಿ ಹಾಗೂ ಸರಕಾರಿ ಪ್ರೌಢಶಾಲೆಯಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ತೇರ್ಗಡೆ ಹೊಂದಿದ 8 ಜನ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುವದರೊಂದಿಗೆ ಸಿಹಿ ಪೊಟ್ಟಣ ನೀಡಿ ಗೌರವಿಸಲಾಯಿತು. ಪ್ರಮುಖರಾದ ಮಹಾದೇವ ಕೋಳಿ, ಸಲೀಮ ಮುಜಾವರ, ಕಾಡಪ್ಪ ನಿಂಬರಗಿ ಸೇರಿದಂತೆ ಹಲವಾರು ಜನ ಪ್ರಮುಖರು ಉಪಸ್ಥಿತರಿದ್ದರು.

# ತುಸು ಬದುಕಬೇಕು.. ನಮಗಾಗಿ ನಾವು

**ಉದಯರಶ್ಮಿ ದಿನಪತ್ರಿಕೆ**

ತಂದೆ ತಾಯಂದಿರ ಸೇವೆ ಮಾಡಬೇಕು, ಗುರು ಹಿರಿಯರನ್ನು ಗೌರವಿಸಬೇಕು, ಒಡಹುಟ್ಟಿದವರನ್ನು ಮತ್ತು ಸ್ನೇಹಿತರನ್ನು ಪ್ರೀತಿಸಬೇಕು, ಸಂಗಾತಿಯನ್ನು ಪ್ರೇಮಿಸಬೇಕು ಮಕ್ಕಳನ್ನು ಚೆನ್ನಾಗಿ ಬೆಳೆಸಬೇಕು ಒಬ್ಬ ಒಳ್ಳೆಯ ನಾಗರಿಕನಾಗಿ

**ವೀಣಾಂತರಂಗ**



–ವೀಣಾ ಎಚ್. ಪಾಟೀಲ್, ಮುಂಡರಗಿ

ಬದುಕಬೇಕು..... ಹೀಗೆ ನಮಗೆ ನಾವೇ ನೂರೆಂಟು ಯೋಜನೆಗಳನ್ನು ಹಾಕಿಕೊಂಡು ಬದುಕುವ ನಾವು ನಮ್ಮ ವೈಯುಕ್ತಿಕ ಬೆಳವಣಿಗೆಗಾಗಿ, ಸ್ವಯಂ ಪ್ರೀತಿಗಾಗಿ ಏನನ್ನು ಮಾಡುತ್ತಿದ್ದೇವೆ ಎಂದು ಕೇಳಿದರೆ ಪ್ರತಿಯೊಬ್ಬರು ಆಶ್ಚರ್ಯದಿಂದ ಕೇಳಬಹುದು ಮೇಲಿನ ಎಲ್ಲ ಕೆಲಸಗಳನ್ನು ಮಾಡಿದರೆ ಸಾಕಲ್ಲವೆ ಎಂದು?!

**ಊಹೂಂ!ಖಂಡಿತ ಸಾಲದು!!**

ನಮಗಿರುವುದು ಒಂದೇ ಬದುಕು.... ಎಲ್ಲ–ರಿಗೂ ಎಲ್ಲವನ್ನೂ ಮಾಡುತ್ತ ಬದುಕಿನ ಕೊನೆಯ ಗಳಿಗೆಯಲ್ಲಿ ಅಯ್ಯೋ ನನಗಾಗಿ ನಾನೇನು ಮಾಡಿಲ್ಲ ಎಂಬ ಅಪರಾಧ ಪ್ರಜ್ಞೆಯಿಂದ ಬಳಲುವುದು ನಮಗೆ ನಾವು ಮಾಡಿಕೊಳ್ಳುವ ಅತಿ ದೊಡ್ಡ ಅಪಚಾರ. ಪ್ರತಿಯೊಬ್ಬ ವ್ಯಕ್ತಿಗೂ ಎರಡು ಜೀವನಗಳಿರುತ್ತವೆ ಒಂದು ಖಾಸಗಿ ಮತ್ತು ಮತ್ತೊಂದು ಸಾಮಾಜಿಕ. ನಮ್ಮ ಸಾಮಾಜಿ–ಕ ಜೀವನವನ್ನು ಅನುಭವಿಸುವ ನಿಟ್ಟಿನಲ್ಲಿ ನಮ್ಮ ಖಾಸಗಿತನ ಕಳೆದೇಹೋಗುತ್ತದೆ. ಬದುಕಿನ ಕೊನೆಯ ಗಳಿಗೆಯಲ್ಲಿ ಪಶ್ಚಾತಾಪ ಪಡುವುದಕ್ಕಿಂತ ಅನುಭವಿಸುವ ಸಮಯ ಬಂದಾಗ ನಮ್ಮ ನಮ್ಮ ಕರ್ತವ್ಯಗಳ ಜೊತೆಗೆ ನಮ್ಮ ವೈಯುಕ್ತಿಕ ಹಕ್ಕುಗಳನ್ನು ಕೂಡ ನಾವು ಖುದ್ದಾಗಿ ಈಡೇ–ರಿಸಿಕೊಳ್ಳಬೇಕು. ಅದುವೇ ಜೀವನದ ಸರಿಯಾದ ಹೂಡಿಕೆ.

**ಈ ನಿಟ್ಟಿನಲ್ಲಿ ಕೆಲವು ಸಲಹೆಗಳು.**

1.. ಬೇಕು ಮತ್ತು ಅವಶ್ಯಕತೆಗಳ ನಡುವಿನ ವ್ಯತ್ಯಾಸವನ್ನು ಅರಿತು ನಮ್ಮ ಮೂಲಭೂತ ಅವಶ್ಯಕತೆಗಳನ್ನು ಈಡೇರಿಸಿಕೊಳ್ಳಬೇಕು.

2. ನಮಗಾಗಿ ನಾವು ಎದ್ದು ನಿಲ್ಲಲೇಬೇಕು. ಎಲ್ಲರಿಗೂ ಮಾಡುವ ನಾವುಗಳು ನಮಗಾಗಿ ಮಾಡಿಕೊಳ್ಳುವಾಗ ತುಸು ಜಿಗುಟುತನವನ್ನು ತೋರುತ್ತೇವೆ.... ಅದು ಕೂಡದು.

3. ನಮ್ಮ ವೈಯುಕ್ತಿಕ





ಬೆಳವಣಿಗೆಗಾಗಿ ನಾವು ಗಮನಹ–ರಿಸಲೇಬೇಕು,ವಿದ್ಯಾರ್ಥಿಯಾಗಿದ್ದಾಗ ಓದಿನೆಡೆ,ಆಟೋಟಗಳೆಡೆ, ಉನ್ನತ ಗುರಿಯಡೆಗೆ ಒಳ್ಳೆಯ ಉದ್ಯೋಗ ಮತ್ತು ಜೀವನ ನಮ್ಮ ಆಯ್ಕೆ ಮತ್ತು ಆದ್ಯತೆಯಾಗಿರಬೇಕು.

4. ನಮ್ಮ ವೈಯಕ್ತಿಕ ನೋವುಗಳಿಗೆ ನಾವೇ ದನಿಯಾಗಬೇಕು.... ನಮ್ಮ ನೋವಿಗೆ ನಾವೇ ಮದ್ದಾಗಬೇಕು. ನಮಗೆ ನಾವೇ ಸ್ವಲ್ಪ ಸಮಯ ಕೊಟ್ಟುಕೊಂಡು ನಮ್ಮ ಮನಸ್ಸಿನ ಭಾವಗಳನ್ನು ಅರಿತು ಅದರಂತೆ ನಡೆದುಕೊಳ್ಳಬೇಕು. ಬೇರೆಯವರನ್ನು ಮೆಚ್ಚಿಸಲು ಅದೆಷ್ಟೇ ಕೆಲಸ ಮಾಡಿದರು ಆತ್ಮ ತೃಪ್ತಿ ಸಿಗುವುದಿಲ್ಲ. ನಮ್ಮನ್ನು ನಾವು ಅರಿತುಕೊಂಡು ನಮಗಾಗಿ ನಾವು ಬದುಕಬೇಕು.


5. ನಮ್ಮ ಮನೋ ದೈಹಿಕ ಅವಶ್ಯಕತೆಗಳು ಮತ್ತು ಸಾಮರ್ಥ್ಯ ನಮಗೆ ಮಾತ್ರ ಗೊತ್ತು. ಆದ್ದರಿಂದ ನಮಗೆ ವಿಶ್ರಾಂತಿ ಬೇಕೆನಿಸಿದಾಗ ಖಂಡಿತವಾಗಿಯೂ ರೆಸ್ಟ್ ಮಾಡಬೇಕು. ಇದು ನಮ್ಮ ಕೆಲಸದ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ, ಉತ್ಪಾದಕತೆಯನ್ನು ಬಲಪಡಿಸುತ್ತದೆ.

6. ಚಿತ್ರವಿಚಿತ್ರ ಮಾತುಕತೆಗಳು, ಅಸಹನೀಯವಾದ ವಾತಾವರಣದಿಂದ ಅಂತರ ಕಾಯ್ದುಕೊಳ್ಳಬೇಕು. ಋಣಾತ್ಮಕ ವ್ಯಕ್ತಿ ಮತ್ತು ವಿಚಾರಗಳು ನಮ್ಮ ಬದುಕಿನ ಮೇಲೆ ವ್ಯತಿರಿಕ್ತ ಪರಿಣಾಮವನ್ನು ಬೀರುತ್ತವೆ ಎಂಬುದರ ಕುರಿತು ಸದಾ ಜಾಗರೂಕರಾಗಿರಬೇಕು.

7. ನಮ್ಮ ಅವಶ್ಯಕತೆಗಳ ಕುರಿತು ಮೆದುವಾಗಿ ಆದರೆ ಅಷ್ಟೇ ಸ್ಪಷ್ಟವಾಗಿ ಇತರರಿಗೆ ತಿಳಿಯಪಡಿಸಬೇಕು .

8. ನಮ್ಮ ಸುತ್ತಲೂ ನಮ್ಮದೇ ಆದ ನಿಯಂತ್ರಣ ವಲಯವನ್ನು ಸೃಷ್ಟಿಸಿಕೊಂಡು ಆ ಮಿತಿಯನ್ನು ಮೀರದಂತೆ ಕಾರ್ಯನಿರ್ವಹಿಸಬೇಕು. ಆಗ ಅನವಶ್ಯಕ ಮಾತುಕತೆಗಳು, ವಾದ ವಿವಾದಗಳು ದೂರವಾಗಿ ನಮ್ಮ ಮಾನಸಿಕ ಶಾಂತಿಯನ್ನು ಸದಾ ಕಾಯುವಂತಹ ವಾತಾವರಣ ಸೃಷ್ಟಿಯಾಗುತ್ತದೆ.

ವ್ಯಕ್ತಿ ಸಮಾಜದ ಶಿಶು ನಿಜ.... ಆದರೆ ತನಗಾಗಿ ಯಾವುದೇ ಆಸೆಗಳನ್ನು ಇಟ್ಟುಕೊಳ್ಳದೆ ಸದಾ ಮತ್ತೊಬ್ಬರಿಗಾಗಿ ತುಡಿಯುತ್ತಾ ಇರುವ ವ್ಯಕ್ತಿ ಒಂದೊಮ್ಮೆ ಮಗನಾಗಿ, ತಂದೆಯಾಗಿ ತಾಯಿಯಾಗಿ ನಿನ್ನ ಕರ್ತವ್ಯವನ್ನು ನೀನು ನಿರ್ವಹಿಸಿದೆ,ಇದನ್ನು ಎಲ್ಲರೂ ಮಾಡುತ್ತಾರೆ, ನಿನ್ನ ಹೆಚ್ಚುಗಾ–ರಿಕೆ ಇದರಲ್ಲಿ ಏನಿದೆ ಎಂದು ಇತರರು ಕೇಳಿದಾಗ ನಮಗಾಗುವ ಆಘಾತ ಅಷ್ಟಿಷ್ಟಲ್ಲ. ಆದರೆ ಬಲುದೂರ ಸಾಗಿ ಬಂದಿರುವ ನಮಗೆ ನಮ್ಮ ಭೂತವನ್ನು ಸರಿಪಡಿಸಿಕೊಳ್ಳಲಾಗುವುದಿಲ್ಲ. ಅದರ ಬದಲಾಗಿ ಇಂದಿನಿಂದಲೇ ಸ್ವಾರ್ಥಿ ಎನಿಸಿಕೊಂಡರೂ ಪರವಾಗಿಲ್ಲ, ನಮ್ಮ ವೈಯುಕ್ತಿಕ ಏಳಿಗೆಗಾಗಿ ಕೆಲ ಸಮಯವನ್ನು ಮೀಸಲಿಟ್ಟುಕೊಂಡು ಜವಾಬ್ದಾರಿಗಳನ್ನು ನಿರ್ವಹಿಸಬೇಕು.



ಬದುಕಿನ ಇಳಿಗಾಲದಲ್ಲಿ ಸದಾ ಬೇರೆಯವರಿಗಾಗಿ ಬದುಕು ತೇಯುವುದೇ ಆಯಿತು ನನ್ನ ಕುರಿತು ನಾನು ಯೋಚಿಸಲೇ ಇಲ್ಲ ಎಂಬ ಹಲುಬುವಿಕೆ ನಮ್ಮದಾಗಬಾರದು, ಆದ್ದರಿಂದ ಜಾಗೃತರಾಗಿ. ನಮಗಾಗಿಯೂ ನಾವು ಬದುಕಲೇ ಬೇಕು.

# ವಿಕಲಚೇತನರಿಗೆ ಉಚಿತ ಕೌಶಲ್ಯಾಭಿವೃದ್ಧಿ ತರಬೇತಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಕಲಚೇತನ ಯುವಕ ಯುವತಿಯರು ಸ್ವಯಂ ಉದ್ಯೋಗ ಕೈಗೊಳ್ಳುವ ಉದ್ದೇಶದಿಂದ ವಿಕಲಚೇತನನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಕೆಯ ವತಿಯಿಂದ ಉಚಿತ ಕೌಶಲ್ಯಾಭಿವೃದ್ಧಿ ತರಬೇತಿ ಹಮ್ಮಿಕೊಳ್ಳಲಾಗಿದೆ. ಮೇ.25 ಅರ್ಜಿಗಳನನು ಸಲ್ಲಿಸಲು ಕೊನೆಯ ದಿನವಾಗಿದೆ.

ಕಂಪ್ಯೂಟರ್ ತರಬೇತಿ, ಮೊಬೈಲ್ ರಿಪೇರಿ, ತೋಟಗಾರಿಕೆ, ನರ್ಸರಿ, ಬಿಸಿನೆಸ್ ಪ್ರೋಸೆಸ್ ಔಟ್‌ಸೋರ್ಸಿಂಗ್, ಬ್ಯೂಟೀಷಿಯನ್, ಟೈಲ–ರಿಂಗ್, ಹೈನುಗಾರಿಕೆ, ಹೋಂ ಅಪ್ಲೈಯನ್ಸಸ್ ರಿಪೇರ್ ವಿಷಯದ ಕುರಿತು ಉಚಿತವಾಗಿ ತರಬೇತಿ ನೀಡಲಾಗುವುದು. ಅರ್ಜದಾರರು ಮೇಲಿನ ಗರಿಷ್ಠ ಎರಡು ವಿಷಯಗಳನ್ನು ಆಯ್ಕೆ ಮಾಡಬಹುದಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ರವಿ ರಾಥೋಡ (ವಿಜಯಪುರ–9003555337), ಪರಶುರಾಮ ಬೋಸಲೆ (ಇಂಡಿ–9972441464), ಮುತ್ತುರಾಜ ಸಾತಿಹಾಳ (ಸಿಂದಗಿ–9980019635), ಎಸ್.ಡಿ. ಬಿರಾದಾರ ( ಬಸವನ ಬಾಗೇವಾಡಿ–8722135660) ಎಸ್. ಕೆ. ಘಾಟಿ(ಮುದ್ದೇಬಿಹಾಳ–9740682979) ಇವರನ್ನು ಹಾಗೂ ಕಚೇರಿ ದೂರವಾಣಿ 08352–796060ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲಿಕರಣದ ಅಧಿಕಾರಿ ರಾಜಶೇಖರ ಧೈವಾಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಪರಿಹಾರ ಹಣ ಸಾಲಕ್ಕೆ ಕಡಿತಗೊಳಿಸಿದ್ದರೆ ಮರುಪಾವತಿಸಲು ಬ್ಯಾಂಕ್‌ಗಳಿಗೆ ಸೂಚನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ರೈತರ ಪರಿಹಾರದ ಹಣವನ್ನು ಸಾಲದ ಖಾತೆಗೆ ಜಮೆ ಮಾಡಿಕೊಂಡಿರುವ ಬಗ್ಗೆ ದೂರುಗಳು ಬಂದಿರುವುದ–ರಿಂದ ತಕ್ಷಣ ಮರುಪಾವತಿಸುವಂತೆ ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳಿಗೆ ಜಿಲ್ಲಾಧಿಕಾರಿ ಟಿ. ಭೂಬಾಲನ್ ಸೂಚಿಸಿದ್ದಾರೆ.

ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿದ ಅವರು, ಕರ್ನಾಟಕ ಸರ್ಕಾರ ಜಿಲ್ಲೆಯ ರೈತರಿಗೆ ಬರ ಪರಿಹಾರವಾಗಿ 36010.20 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದ್ದು, ಇದು ರೈತರ ಬರ ಪರಿಹಾರ ಹಣವಾಗಿರುತ್ತದೆ. ರಾಜ್ಯ ಸರ್ಕಾರದಿಂದ ನೇರವಾಗಿ ರೈತರ ಖಾತೆಗಳಿಗೆ ಬರ ಪರಿಹಾರದ ಹಣ ಬಿಡುಗಡೆ ಮಾಡಿದೆ. ಇದನ್ನು ರೈತರ ಸಾಲದ ಖಾತೆಗೆ ಜಮೆ ಮಾಡಿಕೊಳ್ಳಬಾರದು ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಹಾಗೂ ವಿಜಯಪುರ ಸಹಕಾರ ಸಂಘಳ ಇಲಾಖೆಯ ಉಪ ನಿಬಂಧಕ–ರಿಗೆ ಸೂಚಿಸಲಾಗಿದೆ. ಆದಾಗ್ಯೂ ಸಾಲದ ಖಾತೆಗಳಿಗೆ ಪರಿಹಾರದ ಹಣ ಜಮೆ ಮಾಡಿಕೊಂಡಿರುವುದು ಕಂಡು ಬಂದಿದೆ. ಹಾಗಾಗಿ ಕಡಿತಗೊಳಿಸಿದ ಹಣವನ್ನು ತಕ್ಷಣ ಮರುಪಾವತಿಸಬೇಕು. ಇಲ್ಲದಿದ್ದಲ್ಲಿ ಬ್ಯಾಂಕ್‌ಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ–2005ರನ್ವಯ ಮತ್ತು ಇತರ ಕಾಯ್ದೆಯಡಿಯಲ್ಲಿ ಕ್ರಮ ಜರಗಿಸಲಾಗುವು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತರ ಸಹಮತ ಪಡೆಯದೇ ಅವರ ಬರ ಪರಿಹಾರ ಹಣವನ್ನು ಅವರ ಸಾಲದ ಖಾತೆಗೆ ಜಮೆ ಮಾಡಿಕೊಂಡರೆ ಆಯಾ ಬ್ಯಾಂಕ್ ಮುಖ್ಯಸ್ಥರನ್ನು ಮತ್ತು ಶಾಖಾ ವ್ಯವಸ್ಥಾಪಕರನ್ನು ಜವಾಬ್ದಾರನ್ನಾಸಿ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುವುದು. ಸರಕಾರದಿಂದ ಬಿಡುಗಡೆಯಾದ ಯಾವುದೇ ತರಹದ ಪ್ರೋತ್ಸಾಹದ ಧನವನ್ನು ಸಾಲದ ಖಾತೆಗೆ ಹೊಂದಾಣಿಕೆ ಮಾಡದೆ ಗ್ರಾಹಕರ ಅನುಕೂಲ ಮಾಡಿಕೊಡಬೇಕು. ಹಾಗೂ ಅವರ ಜೊತೆ ಸಂಯಮದಿಂದ ವರ್ತಿಸಬೇಕು. ತಾಂತ್ರಿಕ ಸಮಸ್ಯೆ ಇದ್ದರೆ ಗ್ರಾಹಕರಿಗೆ ಸರಿಯಾದ ತಿಳುವಳಿಕೆ ನೀಡಿ ಮಾರ್ಗದರ್ಶನ ಮಾಡಬೇಕು ಮತ್ತು ಅವರ ಸಮಸ್ಯೆಯನ್ನು ಬೇಗನೆ ಪರಿಹ–ರಿಸಬೇಕು ಎಂದು ಸೂಚಿಸಿದ್ದಾರೆ.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ವೈದ್ಯರಿಗೆ ಸೇವಾ ಮನೋಭಾವ ಇರಬೇಕು :ಶಾಸಕ ಯತ್ನಾಳ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಡೆದಾಡುವ ದೇವರೆಂದೇ ಎಲ್ಲರ ಪ್ರೀತಿಗೆ ಪಾತ್ರರಾಗಿದ್ದ ಪೂಜ್ಯ ಸಿದ್ಧೇಶ್ವರ ಸ್ವಾಮೀಜಿಯವರ ಬದುಕಿನ ಕೊನೆಯ ಗಳಿಗೆಯಲ್ಲಿ ಅವ–ರಿಗೆ ಚಿಕಿತ್ಸೆ ನೀಡುವ ಮೂಲಕ ಭಕ್ತಿಯ ಸಮರ್ಪಣೆ ಮಾಡಿದ ವೈದ್ಯರು ಇಂದು ನಮ್ಮ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಾರೆ ಎಂದರೆ ಇದು ನಿಜಕ್ಕೂ ನಮಗೆಲ್ಲ ಅಭಿಮಾನದ ವಿಷಯವಾಗುತ್ತದೆ. ಪೂಜ್ಯರ ಮಾರ್ಗದಲ್ಲಿ ಹೆಜ್ಜೆ ಹಾಕಿದರೆ ವೈದ್ಯರಿಂದ ಸಾರ್ಥಕ ಸೇವೆ ನೀಡುವುದಕ್ಕೆ ಸಾಧ್ಯವಾಗುತ್ತದೆ ಎಂದು ವಿಜಯಪುರ ನಗರ ಶಾಸಕ ಬಸನಗೌಡ ರಾ. ಪಾಟೀಲ್ ಯತ್ನಾಳ ಅವರು ಹೇಳಿದರು.

ನಗರದ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ವತಿಯಿಂದ ಸಿದ್ಧೇಶ್ವರ ಶಿವಾನುಭವ ಮಂಟಪದ ಪಕ್ಕದ ಸಿದ್ಧೇಶ್ವರ ಮೆಡಿಕಲ್ ಪಕ್ಕ ನೂತನವಾಗಿ ನಿರ್ಮಾಣ ಮಾಡಲಾದ ಕ್ಲೀನಿಕ್‌ನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು; ಭಾರತದ ಎರಡನೇ ವಿವೇಕಾನಂದ ಎಂದು ಗುರುತಿಸಿಕೊಂಡಿರುವ ಪೂಜ್ಯ ಸಿದ್ಧೇಶ್ವರರು ಅನುಭಾವದ ಬದುಕನ್ನು ತೊರೆದು ಚಿರಶಾಂತಿಗೆ ತೆರಳುವ ಸಂದರ್ಭದಲ್ಲಿ ಅವರಿಗೆ ಚಿಕಿತ್ಸೆ ನೀಡಿದ ಡಾ.ಸಂತೋಷ ಬಿ.ಟಿಯವರು ಇಂದು ನಮ್ಮ ಸಂಸ್ಥೆಯ ಜೆ–ಎಸ್‌ಎಸ್ ಹಾಸ್ಪಿಟಲ್ಸ್ ವತಿಯಿಂದ ನಿರ್ಮಾಣ ಮಾಡಲಾಗಿರುವ ಓಪಿಡಿ ಕ್ಲೀನಿಕ್‌ನಲ್ಲಿ ಇದ್ದು ಸಾರ್ವಜನಿಕರಿಗೆ ನೆರವಾಗುವುದಕ್ಕೆ ಅಣಿಯಾಗಿರುವುದು ಅವರಲ್ಲಿನ ಸೇವಾ ಬದ್ಧತೆಗೆ ಸಾಕ್ಷಿ ನೀಡುತ್ತದೆ. ವೈದ್ಯನಾದವನಿಗೆ ಸೇವಾ ಮನೋಭಾವ ಇದ್ದಾಗ ಮಾತ್ರ ಅತ್ಯುತ್ತಮವಾದ ಕಾರ್ಯ ಮಾಡುವುದಕ್ಕೆ ಸಾಧ್ಯವಾಗುತ್ತದೆ. ಸಿದ್ಧೇಶ್ವರ ಶ್ರೀಗಳು ಹಾಕಿಕೊಟ್ಟ ಮಾರ್ಗದಲ್ಲಿ ವೈದ್ಯಕೀಯ ಲೋಕವು ನಡೆದರೆ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಹ ಉತ್ತಮ ಆರೋಗ್ಯ ಒದಗಿಸುವುದಕ್ಕೆ ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ಹೆಜ್ಜೆ ಹಾಕುತ್ತಿರುವ ನಮ್ಮ ಆಸ್ಪತ್ರೆಯು ಇಂದು ಈ ಓಪಿಡಿ ಕ್ಲೀನಿಕ್ ಪ್ರಾರಂಭಿಸುವ ಮೂಲಕ ಸಾರ್ವಜನಿಕರಿಗೆ ನೆರವಾಗುವುದಕ್ಕೆ ಸಿದ್ಧವಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅಥರ್ಗಾದ ಶಣ್ಮುಖಸ್ವಾಮಿ ಗುರುದೇವಾಶ್ರಮದ ಪೂಜ್ಯ ಶ್ರೀ ಈಶ ಪ್ರಸಾದ ಮಹಾಸ್ವಾಮಿಗಳು; ಜನರ ಸೇವೆಗೆಂದು ನಿರ್ಮಾಣವಾಗಿರುವ ಆಸ್ಪತ್ರೆ ಇಂದು ತನ್ನ ಬಾಹುವನ್ನು ವಿಸ್ತರಿಸಿಕೊಳ್ಳುತ್ತ ಅತ್ಯುತ್ತಮವಾದ ಸೇವೆಯನ್ನು ನೀಡುತ್ತ ಭರವಸೆಯಲ್ಲಿ ಹೆಜ್ಜೆ ಹಾಕುತ್ತಿದೆ. ಅದಕ್ಕೆ ಇಂದು ಪ್ರಾರಂಭಗೊಂಡಿರುವ ಓಪಿಡಿ ಮತ್ತೊಂದು ಗರಿಯಾಗಿದೆ. ಮುಂದಿನ ದಿನಗಳಲ್ಲಿ ಸರ್ವ ಭಾಗಗಳಲ್ಲಿ ಈ ರೀತಿಯ ಆರೋಗ್ಯ ಸೇವಾ ಕೇಂದ್ರಗಳು ಪ್ರಾರಂಭಗೊಂಡು ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವುದಕ್ಕೆ ನೆರವಾಗಬೇಕು ಎಂದು ತಿಳಿಸಿದರು.

ಇನ್ನೋರ್ವ ಪೂಜ್ಯರಾದ ಹಿರೇಪಪಡಸಲಾಗಿ ಗುರುದೇವಾಶ್ರಮದ ಪೂಜ್ಯ ಶ್ರೀ ಶಿವಪ್ರಸಾದ ಸ್ವಾಮೀಜಿ; ಇಂದು ಪ್ರಾರಂಭಗೊಂಡ ಓಪಿಡಿ ಮೂಲಕ ಆರೋಗ್ಯದ ಸಂಕಷ್ಟಕ್ಕೆ ಒಳಗಾದವರಿಗೆ ನೆರವಾಗುವ ಮೂಲಕ ಸಾರ್ವಜನಿಕ ವಲಯದಲ್ಲಿ ಸೇವೆಯ ಮಹತ್ವವನ್ನು ಸಾರುವ ಕಾರ್ಯವನ್ನು ವೈದ್ಯರು ಮಾಡಬೇಕಿದ್ದು ಆ ನಿಟ್ಟಿನಲ್ಲಿ ತಮ್ಮ ಗಮನ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿದ್ಧೇಶ್ವರ ಸಂಸ್ಥೆಯ ಉಪಾಧ್ಯಕ್ಷ ಸಂಗು ಸಜ್ಜನ್, ವಿಜಯಪುರದ ಸೀನಿಯರ್ ಪಿಸಿಷಿಯನ್ ಡಾ.ವಿಲಾಸ ಕುಲಕರ್ಣಿ, ಜೆಎಸ್‌ಎಸ್ ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಶರಣ ಮಳಖೇಡ್ಕರ್, ಡಾ.ರವೀಂದ್ರ ತೋಟದ, ಡಾ.ಸಂತೋಷ ಬಿಟಿ ಸೇರಿದಂತೆ ಅನೇಕರು ಉಪಸ್ಥಿತ–ರಿದ್ದರು.

# ಪ್ರಾಚೀನ ಸ್ಮಾರಕಗಳ ರಕ್ಷಣೆ ನಮ್ಮೆಲ್ಲರ ಹೊಣೆ :ಡಾ.ಮೇತ್ರಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಯುವ ಜನರು ನಮ್ಮ ಹಿಂದಿನ ಗತಕಾಲದ ವೈಭವವನ್ನು ಅರಿಯುವ ದೃಷ್ಟಿಕೋನ ಹೊಂದಿರಬೇಕು, ಪ್ರಾಚೀನ ಸ್ಮಾರಕಗಳ ರಕ್ಷಣೆ ನಮ್ಮೆಲ್ಲರ ಹೊಣೆಯಾಗಬೇಕು ಎಂದು ಸಿಕಾಬ್ ಎಆರ್‌ಎಸ್‌ಐ ಕನ್ನಡ ವಿಭಾಗದ ಮುಖ್ಯಸ್ಥ ಡಾ.ಮಲ್ಲಿಕಾರ್ಜುನ ಎಸ್. ಮೇತ್ರಿ ಹೇಳಿದರು.

ಭಾರತೀಯ ಪುರಾತತ್ವ ಸರ್ವೇಕ್ಷಣ, ಧಾರವಾಢ ವಲಯದ ವತಿಯಿಂದ ಗೋಳಗುಮ್ಮಟದ ಆವರಣದಲ್ಲಿರುವ ಪ್ರಾಚ್ಯವಸ್ತು ಸಂಗ್ರಹಾಲಯದಲ್ಲಿ ಇತ್ತಿಚಿಗೆ ಹಮ್ಮಿಕೊಂಡ "ಅಂತರರಾಷ್ಟ್ರೀಯ ವಸ್ತು ಸಂಗ್ರಹಾಲಯ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇತಿಹಾಸವನ್ನು ತಿಳಿಯದವನ್ನು ಇತಿಹಾಸವನ್ನು ಸೃಷ್ಟಿಸಲಾರ ಎಂಬ ಮಾತಿದೆ. ಅದರಂತೆ ತಮ್ಮ ಊರಿನಲ್ಲಿ ಮಹತ್ವಪೂರ್ಣ ದಾಖಲೆಗಳು ಹಾಳಾಗುತ್ತಿದ್ದರೆ, ಅವುಗಳನ್ನು ವಸ್ತುಸಂಗ್ರಹಾಲಯದಲ್ಲಿ ತಂದು ಕೊಟ್ಟರೆ ತಮ್ಮ ಊರಿನ ವಿಳಾಸ, ಮತ್ತು ತಂದು ಕೊಟ್ಟವರ ಹೆಸರು ಹಾಕುವುದರ ಜೊತೆಗೆ ಅದರ ಸಂರಕ್ಷಣೆಯನ್ನು ಜವಾಬ್ದಾ–ರಿಯನ್ನು ಮಾಡುತ್ತಾರೆ. ಹೀಗಾಗಿ ಯಾವುದೇ ಐತಿಹಾಸಿಕ ಮಹತ್ವವುಳ್ಳ ಪ್ರಾಚ್ಯಾವೇಶಗಳನ್ನು ನಾಶವಾಗದಂತೆ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.




ಸಹಾಯಕ ಪುರಾತತ್ವವಿದರಾದ ಎನ್. ಪ್ರಸನ್ನಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಭಾರತವು ಅನೇಕ ವೈವಿಧ್ಯಮಯ ಸಾಂಸ್ಕೃತಿಕ ಪರಂಪರೆಯನ್ನು ಹೊಂದಿದೆ. ಅವುಗಳು ಮುಂದಿನ ಜನಾಂಗಕ್ಕೆ ಸ್ಫೂರ್ತಿದಾಯಕ ಚರಿತ್ರೆ, ಕಥೆಗಳು ಹೇಳುತ್ತವೆ. ಅವುಗಳನ್ನು ನಾವು ಅರ್ಥ ಮಾಡಿಕೊಳ್ಳಬೇಕು ಹಾಗೂ ನಮ್ಮ ಮುಂದಿನ ಜನಾಂಗದವರಿಗೆ ತಲುಪಿಸುವ ಕೆಲಸ ಮಾಡುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ವಿ.ಬಿ. ದರ್‌ಬಾರ್ ಪಿ.ಯು. ಕಾಲೇಜಿನ ಇತಿಹಾಸ ವಿಭಾಗದ ಅನಿಲ್‌ಕುಮಾರ್ ಜಿ. ಥೊಬ್ಬಿ ಮಾತನಾಡಿ, ವಸ್ತುಸಂಗ್ರಹಾಲಯಗಳು ಜನಸಾಮಾನ್ಯರಲ್ಲಿ ನಮ್ಮ ಸಾಂಸ್ಕೃತಿಕ ಸಂಪತ್ತಿನ ಅರಿವನ್ನು ಮೂಡಿಸುವಲ್ಲಿ ಬಹ ಮಹತ್ವವಾದ ಕೆಲಸವನ್ನು ಮಾಡುತ್ತವೆ ಎಂದು ಹೇಳಿದರು.

ಅಂತರರಾಷ್ಟ್ರೀಯ ವಸ್ತುಸಂಗ್ರಹಾಲಯದ ದಿನಾಚರಣೆಯ ಅಂಗವಾಗಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗಾಗಿ ವಿಶೇಷ ಉಪನ್ಯಾಸ, ಪ್ರಬಂಧ ಸ್ಪರ್ಧೆ, ಚಿತ್ರಕಲೆ (ಡ್ರಾಯಿಂಗ್) ಸ್ಪರ್ಧೆಗಳನ್ನು ಏರ್ಪಡಿಸಲಾಗಿ–ತ್ತು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಎಲ್ಲಾ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಬಹುಮಾನ ಮತ್ತು ಇಲಾಖೆಯ ಸರ್ಟಿಫೀಕೆಟ್ ವಿತರಿಸಲಾಯಿತು.

ಸುರೇಶ ಬಿರಾದರ್ ಕಾರ್ಯಕ್ರಮವನ್ನು ನಿರೂಪಿಸಿದರು, ಆರ್. ಎಂ. ಕರ್ಜಗಿ, ವಿಷ್ಣುತ್ ಗೌಡ, ವಸ್ತುಸಂಗ್ರಹಾಲಯ, ವಿಜಯಪುರ ಉಪವಲಯ, ಹಾಗೂ ಗಾರ್ಡನ್ ಸಿಬ್ಬಂದಿವರ್ಗ, ಪ್ರವಾಸಿಮಿತ್ರರು, ವಿ.ಬಿ. ದರಾಬಾರ್ ಹೈಸ್ಕೂಲ್‌ನ, ಬಿ.ಸಿ.ಎಂ. ವಿದ್ಯಾರ್ಥಿನಿಯರ ವಸತಿಗೃಹದ ಹಾಗೂ ವಿವಿಧ ಶಾಲೆಯ ವಿದ್ಯಾರ್ಥಿಗಳು, ಶಾಲಾ ಶಿಕ್ಷಕರು, ಉಪನ್ಯಾಸಕರು ಭಾಗವಹಿಸಿದ್ದರು.

# ಕೆಇಬಿ ಆವರಣದಲ್ಲಿ ಅಧಿಕಾರಿಯ ಎಣ್ಣೆ ಪಾರ್ಟಿ!

**ಉದಯರಶ್ಮಿ ನ್ಯೂಸ್**

ಇಂಡಿ: ಕೆಇಬಿ ವಿದ್ಯುತ್ ವಿತರಣಾ ಕೇಂದ್ರದ ಆವರಣದಲ್ಲಿ ಅಧಿಕಾರಿಯೋರ್ವ ಎಣ್ಣೆ ಪಾರ್ಟಿ ಮಾಡಿರುವ ಘಟನೆ ಜಿಲ್ಲೆಯ ಇಂಡಿ ತಾಲ್ಲೂಕಿನ ಹಿರೇಮಸಳಿ ಗ್ರಾಮದ ವಿದ್ಯುತ್ ವಿತರಣಾ ಕೇಂದ್ರದ

> ವಿದ್ಯುತ್ ವಿತರಣಾ ಕಛೇರಿಯ ಆವರಣದಲ್ಲಿ ಎಣ್ಣೆ ಪಾರ್ಟಿ ಮಾಡಿದ್ದು, ಇಲಾಖೆಗೆ ಹಾಗೂ ತಾಲ್ಲೂಕು ಮುಜಗರ ಪಡುವಂತಾಗಿದೆ. ವಿದ್ಯುತ್ ಅವಘಡದಿಂದ ಅನೇಕ ರೈತರು ಸಾವು ನೋವಿನ ಹಾನಿ ಅನುಭವಿಸಿದ್ದು ಉದಾಹರಣೆಗಳಿವೆ. ಎಷ್ಟೋ ಕುಟುಂಬಗಳು ಬೀದಿಗೆ ಬಂದಿವೆ. ಆದರೆ ಹಿರೇಮಸಳಿ ಹೆಸ್ಕಾಂ ಜೆಇ ಕುಡಿದ ಬಗ್ಗೆ ಹಲವು ಬಾರಿ ಫೋನ್ ಕರೆ ಮೂಲಕ ಮೇಲಾಧಿಕಾರಿಗಳ ಗಮನಕ್ಕೂ ತಂದರೂ ಪ್ರಯೋಜನವಾಗಿಲ್ಲ. ಆದರೆ ಸರಕಾರ ಇನ್ನಾದರೂ ತಪ್ಪಿಸ್ಥರ ವಿರುದ್ಧ ಕ್ರಮವಹಿಸಬೇಕು. ಇಲ್ಲವಾದರೆ ಉಗ್ರವಾದ ಪ್ರತಿಭಟನೆ ಮಾಡಲು ಸಹಕರಿದಂತಾಗುತ್ತದೆ."
>
> – ಶಿವು ಮಲಕಗೊಂಡ
>
> ಅಧ್ಯಕ್ಷರು, ಕರವೇ ತಾಲ್ಲೂಕು ಘಟಕ ಇಂಡಿ (ಪ್ರವೀಣಶೆಟ್ಟಿ ಬಣ)




ಆವರಣದಲ್ಲಿ ನಡೆದಿದೆ. ಕೆಇಬಿ ಜೆಇ ಗೊಲ್ಲಾಳಪ್ಪ ನಾನಾಗೌಡ ಪಾಟೀಲ ಎಣ್ಣೆ ಪಾರ್ಟಿ ಮಾಡಿದ್ದಾನೆ. ನೈಟ್ ಡ್ಯೂಟಿಯಲ್ಲಿ ಖಾಸಗಿ ವ್ಯಕ್ತಿಗಳೊಂದಿಗೆ ಜೆಇ ಪಾಟೀಲ ಸಕತ್ ಎಣ್ಣೆ ಪಾರ್ಟಿ ಮಾಡುವಾಗ ಸ್ಥಳೀಯರ ಕೈಗೆ ರೈಡ್‌ಹ್ಯಾಂಡ್‌ಯಾಗಿ ಸಿಕ್ಕಿಬಿದ್ದಿದ್ದಾನೆ. ನನಗೆ ಅವಕಾಶ ಇದೆ. ನಾನು ಪಾರ್ಟಿ ಮಾಡುತ್ತೇನೆ ಎಂದು ಜೆಇ ಪಾಟೀಲ ಹೇಳಿದ್ದಾನೆ. ಅದಕ್ಕಾಗಿ ಸ್ಥಳೀಯರು ಜೆಇ ವಿರುದ್ಧ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಒಂದು ವರ್ಷ ಪೂರೈಸಿದ ಕಾಂಗ್ರೆಸ್ ಸರ್ಕಾರ :ಸಂಭ್ರಮಾಚರಣೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಸೋಮವಾರ ರಾಜ್ಯದಲ್ಲಿ ಆಡಳಿತಕ್ಕೆ ಬಂದ ಕಾಂಗ್ರೆಸ್ ಸರ್ಕಾರಕ್ಕೆ ಒಂದು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಪಟಾಕ್ಷಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.



ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಈರಣ್ಣ ಪಟ್ಟಣಶೆಟ್ಟಿ, ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ, ನಗರ ಘಟಕದ ಅಧ್ಯಕ್ಷ ಸುರೇಶಗೌಡ ಪಾಟೀಲ, ಮಾತನಾಡಿ, ರಾಜ್ಯದಲ್ಲಿ ನಮ್ಮ ಸರ್ಕಾರ ಚುನಾವಣೆ ಮುನ್ನ ಘೋಷಣೆ ಮಾಡಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಜಾರಿ ತರುವ ಮೂಲಕ ನುಡಿದಂತೆ ನಡೆದಿದೆ. ಈ ಯೋಜನೆಗಳು ಜನರಿಗೆ ತಲುಪಿವೆ. ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅನೇಕ ಜನರಿಗೆ ಸದುಪಯೋಗವಾಗುತ್ತಿದೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಶಿವಕುಮಾರ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ಮುಂಬರುವ ನಾಲ್ಕು ವರ್ಷ ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ರಾಜ್ಯ ಅಭಿವೃದ್ಧಿ ಪಥದತ್ತ ಸಾಗಲಿದೆ ಎಂದರು.

ಸಂಭ್ರಮಾಚರಣೆಯಲ್ಲಿ ಮುಖಂಡರಾದ ಲೋಕನಾಥ ಅಗರವಾಲ, ಬಸಣ್ಣ ದೇಸಾಯಿ, ಎಂ.ಜಿ.ಆದಿಗೊಂಡ,ಶೇಖರ ಗೊಳಸಂಗಿ, ಬಸವರಾಜ ಹಾರಿವಾಳ, ರವಿ ರಾಠೋಡ, ರವಿ ಚಿಕ್ಕೊಂಡ, ಬಸವರಾಜ ಕೋಟಿ, ಸಂಗಯ್ಯ ಕಾಳಹಸ್ತೇಶ್ವರಮಠ, ಜಟ್ಟಿಂಗರಾಯ ಮಾಲಗಾರ, ಈರಣ್ಣ ವಂದಾಲ, ತಮ್ಮಣ್ಣ ಕಾನಾಗಡ್ಡಿ, ಮುರಗೇಶ ನಾಯ್ಕೋಡಿ, ನಜೀರ ಗಣಿ, ಸಂಕನಗೌಡ ಪಾಟೀಲ, ಮತಾಬ ಬಮ್ಮನಳ್ಳಿ, ಕಮಲಸಾಬ ಕೊರಬು, ಅಜೀಜ ಬಾಗವಾನ, ಸಿದ್ರಾಮ ಪಾತ್ರೋಟ, ರಮೇಶ ಬೆಕಿನಾಳ, ಮಹಾಂತೇಶ ಸಾಸಾಬಾಳ, ಪುನೀತ ಲಮಾಣಿ ಇತರರು ಭಾಗವಹಿಸಿದ್ದರು.

# ಬದುಕಿನ ಸಾರ್ಥಕತೆಯ ಹೆದ್ದಾರಿಯಲ್ಲಿ ಸಾಗುತ್ತಿರುವವರನ್ನು ನೆನೆಯುತ್ತ..

**ಉದಯರಶ್ಮಿ ದಿನಪತ್ರಿಕೆ**




ಕೆಚ್ಚೆದೆಯ ಕನ್ನಡತಿ ಅನು ಅಕ್ಕ ಎಂಬ ಹೆಸರಿನ ಸಾಮಾಜಿಕ ಜಾಲತಾಣಗಳ ಅಕೌಂಟಿನ ಯುವತಿಯೊಬ್ಬಳು ರಾಜ್ಯಾದ್ಯಂತ ಸಂಚರಿಸಿ ಸರ್ಕಾರಿ ಶಾಲೆಯ ಕಟ್ಟಡಗಳಿಗೆ ಸುಣ್ಣ ಬಣ್ಣ ಬಳಿಯುತ್ತಾ, ಗೋಡೆಗಳಿಗೆ ಚಿತ್ರ ಬಿಡಿಸುತ್ತಾ, ನಿರಂತರವಾಗಿ ಸಾಕಷ್ಟು ಶ್ರಮ ಪಡುತ್ತಾ ಸಮಾಜ ಸೇವೆ ಮಾಡುತ್ತಿದ್ದಾರೆ..

ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಜನಪ್ರಿಯತೆಯನ್ನು ಪಡೆದಿದ್ದಾರೆ. ದಾನಿಗಳಿಂದ ಒಂದಷ್ಟು ಹಣ ಸಂಗ್ರಹಿಸಿ, ತನ್ನದೇ ಒಂದು ತಂಡ ಕಟ್ಟಿಕೊಂಡು, ಈ ರೀತಿ ಊರೂರು ಸುತ್ತುತ್ತಾ ಸರ್ಕಾರಿ ಶಾಲೆಗಳನ್ನು ಸುಂದರಗೊಳಿಸುವ ಕೆಲಸದಲ್ಲಿ ನಿರತರಾಗಿದ್ದಾರೆ. ಸಮಾಜ ಕೂಡ ಅದನ್ನು ಗುರುತಿಸಿ ಆಕೆಗೆ ಪ್ರೋತ್ಸಾಹಿಸುತ್ತಾ, ಪ್ರಶಸ್ತಿ ಸನ್ಮಾನ ನೀಡುತ್ತಾ, ಗೌರವಿಸುತ್ತಿದೆ..

ನಿಜಕ್ಕೂ ಬದುಕಿನ ಸಾರ್ಥಕತೆ ಅಡಗಿರುವುದೇ ಇಲ್ಲಿ. ನೆಪೋಲಿಯನ್ ಬೋನಾಪಾರ್ಟೆ ಎಂಬ ಫ್ರಾನ್ಸಿನ ಕ್ರಾಂತಿಕಾರಿ ಹೀಗೆ ಹೇಳುತ್ತಾನೆ "ನಾವು ಹುಟ್ಟಿದ ಮೇಲೆ ನಾವಿಡುವ ಪ್ರತಿ ಹೆಜ್ಜೆಯಲ್ಲೂ



ಒಂದೊಂದು ಗುರುತು ಬಿಟ್ಟು ಹೋಗಬೇಕು " ಇಡೀ ಸಮಾಜ ಎಷ್ಟೇ ಅಧೋಗತಿಯ ಕಡೆ ಚಲಿಸುತ್ತಿದ್ದರು ಇಂತಹ ಕೆಲವರ ಸೇವೆಗಳು ಸಮಾಜ ಇನ್ನೂ ತನ್ನ ಘನತೆಯನ್ನು ಕಾಪಾಡಿಕೊಳ್ಳಲು ಕಾರಣವಾಗಿದೆ..

ಎಷ್ಟೋ ಜನ ಬಡ ಮಕ್ಕಳಿಗೆ ಉಚಿತವಾಗಿ ಆಹಾರ ಶಿಕ್ಷಣ ವಸತಿ ನೀಡುವ ಕೆಲಸ



ಈಗಲೂ ಮಾಡುತ್ತಿದ್ದಾರೆ. ಅನೇಕರು ಪರಿಸರದ ಉಳಿವಿಗಾಗಿ ನಿರಂತರವಾಗಿ ಶ್ರಮ ಪಡುತ್ತಾ ಜಾಗೃತಿ ಮೂಡಿಸು ತ್ತಿದ್ದಾರೆ. ಬಹಳಷ್ಟು ಜನ ಭ್ರಷ್ಟಾಚಾರದ ವಿರುದ್ಧವೂ ಸದಾ ಕಾಲ ಎಲ್ಲಾ ಕಷ್ಟಗಳನ್ನು, ಜೀವ ಭಯಗಳನ್ನು ಸಹಿಸಿಕೊಂಡು ಹೋರಾಡುತ್ತಿದ್ದಾರೆ. ನಮ್ಮ ನಡೆ ಅಸ್ಪೃಶ್ಯತೆ ಮುಕ್ತ ಭಾರತದೆಡೆಗೆ ಎಂದು ಕೋಲಾರದ ಅರಿವು ಸಂಸ್ಥೆ ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ಹಳ್ಳಿಗಳಲ್ಲಿ ಜನ ಜಾಗೃತಿ ಮೂಡಿಸುತ್ತಿದೆ. ಗ್ರಂಥ–ಾಲಯಗಳ ಉಳಿವಿಗಾಗಿ, ಜನರ ಓದಿನ ಹವ್ಯಾಸವನ್ನು ಬೆಳೆಸಲು ಅನೇಕರು ಖಾಸಗಿ ಗ್ರಂಥಾಲಯಗಳನ್ನು ಸ್ಥಾಪಿಸಿ ಸೇವೆ ಮಾಡುತ್ತಿದ್ದಾರೆ. ಮಧ್ಯಪಾನ, ಧೂಮಪಾನದ ವಿರುದ್ಧ ರಾಜ್ಯಾದ್ಯಂತ ನಿರಂತರ ಹೋರಾಟಗಳು ನಡೆಯುತ್ತಿವೆ. ಕೆರೆ ಕಟ್ಟೆಗಳನ್ನು, ಬಾವಿಗಳನ್ನು, ನೀರಾವರಿ ಸೌಕರ್ಯಗಳನ್ನು ಒದಗಿಸಲು ಅನೇಕ ಸ್ವಯಂ ಸೇವಾ ಸಂಸ್ಥೆಗಳು ಈಗಲೂ ಪ್ರಯತ್ನಶೀಲವಾಗಿವೆ. ವ್ಯಕ್ತಿಯೊಬ್ಬರು ನೀರಿನ ಮಾರಾಟವನ್ನು ತಡೆಯಲು ಕಳೆದ 20 ವರ್ಷಗಳಿಂದ ಮೌನ ವ್ರತವನ್ನು ಆಚ–ರಿಸುತ್ತಿದ್ದಾರೆ. ಇನ್ನು ಕೆಲವರು ವೃದ್ಧಾಶ್ರಮಗಳನ್ನು, ಅನಾಥ–ಾಶ್ರಮಗಳನ್ನು ಕಟ್ಟಿ ನಿರ್ಗತಿ–ಕರಿಗೆ ಆಶ್ರಯ ನೀಡುತ್ತಿದ್ದಾರೆ. ಮತ್ತೊಂದಿಷ್ಟು ಜನ ಈ ಸಮಾಜದ ಮೌಢ್ಯಗಳ ವಿರುದ್ಧ ಹೋರಾಡುತ್ತಾ ವೈಚಾರಿಕ ಮನೋಭಾವವನ್ನು ಜನರಲ್ಲಿ ಬೆಳೆಸಲು ಪ್ರಯತ್ನಿಸುತ್ತಿದ್ದಾರೆ..

ಹೀಗೆ ಹೇಳುತ್ತಾ ಹೋದರೆ ಸಾವಿರಾರು ಜನರು ತಮ್ಮ ಇಡೀ ಜೀವನವನ್ನು ಸಮಾಜ ಸೇವೆಗಾಗಿಯೇ ಮುಡುಪಿಟ್ಟು ತಮ್ಮ ಬದುಕನ್ನು ಸಾರ್ಥಕ ಗೊಳಿಸಿಕೊಳ್ಳುತ್ತಿದ್ದಾರೆ ಮತ್ತು ಆ ಮುಖಾಂತರ ಸಮಾಜದ ಒಳ್ಳೆಯ ಗುಣಗಳು ಇನ್ನೂ ಜೀವಂತ ಇರುವಂತೆ ನೋಡಿಕೊಂಡಿದ್ದಾರೆ..

ದುರಂತವೆಂದರೆ, ಕೆಲವು ರಾಜಕಾರಣಿಗಳು, ಅಧಿಕಾ–ರಿಗಳು, ಉದ್ಯಮಿಗಳು, ಧಾರ್ಮಿಕ ಮುಖಂಡರು, ಪತ್ರಕರ್ತರು, ವ್ಯಾಪಾರಿಗಳು, ಚಲನಚಿತ್ರ ನಟನಟಿಯರು ಸೇರಿ ಕೆಲವು ವರ್ಗಗಳು ತಮ್ಮ ಶ್ರೀಮಂತಿ–ಕೆಗಾಗಿ, ತಮ್ಮ ಅಧಿಕಾರಕ್ಕಾಗಿ, ತಮ್ಮ ಸ್ವಾರ್ಥಕ್ಕಾಗಿ ಈ ಸಮಾಜದ ಮೌಲ್ಯಗಳನ್ನು, ಸಂಪತ್ತನ್ನು ನಾಶಪಡಿಸುತ್ತಲೇ ಸಾಗುತ್ತಿದ್ದಾರೆ..

ವಿದ್ಯಾವಂತರ ಸಂಖ್ಯೆ ಹೆಚ್ಚಾದಷ್ಟು ಸಮಾಜದ ದುಷ್ಟತನ ಹೆಚ್ಚಾಗುತ್ತಿರುವುದು ಅತ್ಯಂತ ನೋವಿನ ಸಂಗತಿ. ಹಾಗೆಯೇ ಶೇಕಡ 90% ರಷ್ಟು ಜನ ದೇವರಲ್ಲಿ ಮತ್ತು ಒಂದು ದೈವಿಕ ಶಕ್ತಿಯಲ್ಲಿ ಅಪಾರವಾದ ನಂಬಿಕೆಯನ್ನು ಹೊಂದಿದ್ದಾರೆ. ಜೊತೆಗೆ ಪ್ರತಿನಿತ್ಯ ತಮ್ಮ ಧರ್ಮದ ದೇವರಲ್ಲಿ ಪ್ರಾಥ–





ರ್ನೆಗಳನ್ನು, ಪೂಜೆ ಪುನಸ್ಕಾರಗಳನ್ನು ಮಾಡುತ್ತಾರೆ. ಆದರೆ ಅದೇ ಜನ ತಮ್ಮ ನಡವಳಿಕೆಯಲ್ಲಿ ಅತ್ಯಂತ ಅವಮಾನವೀಯ, ಕೆಟ್ಟ, ದುಷ್ಟತನವನ್ನು ಅಳವಡಿಸಿಕೊಂಡಿದ್ದಾರೆ..

ವಿಚಿತ್ರ ನೋಡಿ ತಾವು ನಂಬಿದ ದೇವರು ಮತ್ತು ಧರ್ಮಕ್ಕೂ ಸಹ ಇವರು ದ್ರೋಹ ಬಗೆಯುತ್ತಾರೆ. ಎಲ್ಲ ಒಳ್ಳೆಯತನಗಳ ಸಂಕೇತವಾಗಿ ದೇವರು, ಧರ್ಮವಿದ್ದರೆ ಇವತ್ತು ಅದಕ್ಕೆ ವಿರುದ್ಧ ನಡವಳಿಕೆಗಳೇ ಹೆಚ್ಚಾಗಲು ಈ ಆತ್ಮವಂಚಕ ಮನಸ್ಸುಗಳೇ ಕಾರಣ. ಕುಂಕುಮ ವಿಭೂತಿ ಗಡ್ಡ ಟೋಪಿ ಕ್ರಾಸ್ ಹೂವು ಮುಂತಾದ ಧಾರ್ಮಿಕ ಸಂಕೇತಗಳು, ಪೂಜೆ ಹೋಮ ಹವನ ಮುಂತಾದ ಆಚ–ರಣೆಗಳು ಕೇವಲ ಪ್ರದರ್ಶನದ ಗೊಂಬೆಗಳಾಗಿ ನಿಜವಾದ ಸೇವಾ ಮನೋಭಾವ ಮರೆಯಾಗುತ್ತಿರುವ ಸಂದರ್ಭದಲ್ಲಿ ಕೆಲವೇ ಜನರಾದರು ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವುದರಿಂದ ಈ ಸಮಾಜ ಕನಿಷ್ಠ ಇಷ್ಟಾದರೂ ಸುವ್ಯವಸ್ಥೆಯಲ್ಲಿದೆ. ಇಲ್ಲದಿದ್ದರೆ ತುಂಬಾ ಕಷ್ಟವಾಗುತ್ತಿತ್ತು..

ಆದ್ದರಿಂದ ಅವಕಾಶ ಇರುವವರು, ಆಸಕ್ತಿ ಇರುವವರು, ಕನಸುಗಳನ್ನು ಹೊಂದಿರುವವರು ಸಾಧ್ಯವಾದಷ್ಟು ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳಿ ಅಥವಾ ಅದರಲ್ಲಿ ನಿರತರಾದವರಿಗೆ ಕೈಲಾದ ಸಹಾಯ ಮಾಡಿ ಎಂದು ಮನವಿ ಮಾಡಿಕೊಳ್ಳುತ್ತಾ..

# ಬೆಳೆ ಪರಿಹಾರ: 2,59,063 ರೈತರ ಖಾತೆಗಳಿಗೆ 36010 ಲಕ್ಷರೂ. ಜಮೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಬೆಳೆ ಹಾನಿಯಾದ ಅರ್ಹ ರೈತರಿಗೆ ಗರಿಷ್ಠ ರೂ. 2ಲಕ್ಷ ರವರೆಗೆ ಅರ್ಹತೆಯಂತೆ ಪಾವತಿಸಿರುವ ಬೆಳೆಹಾನಿ ಪರಿಹಾರದ ಮೊತ್ತವನ್ನು ಪರಿಗಣನೆಗೆ ತೆಗೆದುಕೊಂಡು ಅರ್ಹತೆಯಂತೆ ಇನ್ನುಳಿದ ಬಾಕಿ ಬೆಳೆಹಾನಿ ಪರಿಹಾರ ಮೊತ್ತವನ್ನು ನೇರವಾಗಿ ರೈತರ ಖಾತೆಗೆ ಜಮೆ ಮಾಡಲಾಗುತ್ತಿದ್ದು, ಈವರೆಗೆ ಜಿಲ್ಲೆಯ 2,59,063 ರೈತರ ಖಾತೆಗಳಿಗೆ 36010.20 ಲಕ್ಷ ರೂ. ರೈತರ ಖಾತೆಗಳಿಗೆ ಡಿಬಿಟಿ ಮೂಲಕ ಜಮೆ ಮಾಡಲಾಗಿದ್ದು, ರೈತರು ತಮ್ಮ ಬ್ಯಾಂಕ್ ಖಾತೆಗಳಿಗೆ ಪರಿಹಾರ ಧನ ಜಮೆಯಾದ ಬಗ್ಗೆ ಪರಿಹಾರ ಜಾಲತಾಣವಾದ ಃಣಣಠ:// ಠಿಚಿಡ್ಝುಚಿಡಿಚಿ.ಇಚಿಡಿಟಚಿಣಚಿ–ಇಚಿ.ರಠತ.ಎಟಿ/ ಜಡಿತುಛಿಜ92/ ಪರಿಶೀಲಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ.



ಕೆಲವೊಂದು ತಾಂತ್ರಿಕ ಕಾರಣಗಳಿಂದಾಗಿ ಜಿಲ್ಲೆಯ ಒಟ್ಟು 18,727 ಫಲಾನುಭವಿ ರೈತರಿಗೆ ಪರಿಹಾರ ಧನವು ಜಮೆಯಾಗಿರುವುದಿಲ್ಲ. ಇಂತಹ ರೈತರಿಗೆ ತಿಳುವಳಿಕೆ ನೀಡಿ, ಅವಶ್ಯಕ ದಾಖಲೆಗಳನ್ನು ಪಡೆದು, ಪರಿಹಾರ ಧನ ಜಮೆ ಮಾಡಲು ಕ್ರಮ ವಹಿಸುವಂತೆ ಈಗಾಗಲೇ ಜಿಲ್ಲೆಯ ಎಲ್ಲ ತಹಶೀಲ್ದಾರರಿಗೆ ಸೂಚಿಸಲಾಗಿದ್ದು, ಆದಷ್ಟು ಬೇಗನೆ ಬಾಕಿ ಫಲಾನುಭವಿಗಳ ಖಾತೆಗೆ ಪರಿಹಾರ ಧನ ಜಮೆಯಾಗಲಿದೆ. ಬೆಳೆಹಾನಿ ಪರಿಹಾರ ಧನ ಜಮೆ ಕುರಿತು ಫಲಾನುಭವಿಗಳಿಗೆ ಮಾಹಿತಿ ಒದಗಿಸಲು ತಾಲೂಕಾವಾರು ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದ್ದು, ಸಹಾಯವಾಣಿ ಕೇಂದ್ರಗಳಿಗೆ ಕರೆ ಮಾಡಿ ಸಹ ಪರಿಹಾರ ಕಂಡುಕೊಳ್ಳಬಹುದಾಗಿದೆ.

ತಾಲೂಕಾವಾರು ವಿವರ : ಜಿಲ್ಲೆಯ ಆಲಮೇಲ ತಾಲೂಕಿನ 19295 ಫಲಾನುಭವಿಗಳ ಪೈಕಿ 18,186 ರೈತರ ಖಾತೆಗೆ 3545.24 ಲಕ್ಷ ರೂ., ಬಬಲೇಶ್ವರ ತಾಲೂಕಿನ 20020 ಫಲಾನುಭವಿಗಳ ಪೈಕಿ 19,294 ರೈತರ ಖಾತೆಗೆ 3136.02 ಲಕ್ಷ ರೂ. ಬಸವನಬಾಗೇವಾಡಿ ತಾಲೂಕಿನ 27174 ಫಲಾನುಭವಿಗಳ ಪೈಕಿ 25307 ರೈತರ ಖಾತೆಗೆ 3346.84ಲಕ್ಷ ರೂ. ಬಿಜಾಪುರ ತಾಲೂಕಿನ 18912 ಫಲಾನುಭವಿಗಳ ಪೈಕಿ 17743 ರೈತರ ಖಾತೆಗೆ 2388.49 ಲಕ್ಷ ರೂ. ಚಡಚಣ ತಾಲೂಕಿನ 19840 ಫಲಾನುಭವಿಗಳ ಪೈಕಿ 18409 ರೈತರ ಖಾತೆಗೆ 2497.3 ಲಕ್ಷ ರೂ. ದೇವರಹಿಪ್ಪರಗಿ ತಾಲೂಕಿನ 21088 ಫಲಾನುಭವಿಗಳ ಪೈಕಿ 19452 ರೈತರ ಖಾತೆಗೆ 2295.77 ಲಕ್ಷ ರೂ. ಇಂಡಿ ತಾಲೂಕಿನ 45542 ಫಲಾನುಭವಿಗಳ ಪೈಕಿ 42320 ರೈತರ ಖಾತೆಗೆ 6471.97 ಲಕ್ಷ ರೂ. ಕೊಲ್ಹಾರ ತಾಲೂಕಿನ 10336 ಫಲಾನುಭವಿಗಳ ಪೈಕಿ 9783 ರೈತರ ಖಾತೆಗೆ 1919.03 ಲಕ್ಷ ರೂ. ಮುದ್ದೇಬಿಹಾಳ ತಾಲೂಕಿನ 21860 ಫಲಾನುಭವಿಗಳ ಪೈಕಿ 20035 ರೈತರ ಖಾತೆಗೆ 2569.17 ಲಕ್ಷ ರೂ. ನಿಡಗುಂದಿ ತಾಲೂಕಿನ 7785 ಫಲಾನುಭವಿಗಳ ಪೈಕಿ 7246 ರೈತರ ಖಾತೆಗೆ 1158.83ಲಕ್ಷ ರೂ. ಸಿಂದಗಿ ತಾಲೂಕಿನ 25203 ಫಲಾನುಭವಿಗಳ ಪೈಕಿ 23324 ರೈತರ ಖಾತೆಗೆ 3387.24 ಲಕ್ಷ ರೂ. ತಾಳಿಕೋಟೆ ತಾಲೂಕಿನ 20516 ಫಲಾನುಭವಿಗಳ ಪೈಕಿ 19,438 ರೈತರ ಖಾತೆಗೆ 2147.34 ಲಕ್ಷ ರೂ. ತಿಕೋಟಾ ತಾಲೂಕಿನ 10149 ಫಲಾನುಭವಿಗಳ ಪೈಕಿ 9526 ರೈತರ ಖಾತೆಗೆ 1146.96 ಲಕ್ಷ ರೂ. ಜಮೆ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಮಕ್ಕಳಿಗೆ ಕೇವಲ ಪಠ್ಯ ಬೋಧನೆಗೆ ಸಿಮೀತಗೊಳಿಸದಿರಿ :ಕೋಳೂರ




ಉದಯರಶ್ಮಿ ನ್ಯೂಸ್

ಸಿಂದಗಿ: ಪಾಲಕರು ತಮ್ಮ ಮಕ್ಕಳಿಗೆ ಕೇವಲ ಪಠ್ಯ ಬೋಧನೆಗೆ ಸಿಮೀತಗೊಳಿಸದೇ ಪಠ್ಯೇತರ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಮಾಡಿದ್ದು ಸಂತಸ ತಂದಿದೆ ಎಂದು ಸಂಸ್ಥೆಯ ಅಧ್ಯಕ್ಷ ವೀಠ್ಠಲ ಕೋಳೂರ ಹೇಳಿದರು.

ಪಟ್ಟಣದ ಹೊರವಲಯದ ಭೀಮಾ ಯುನಿವರ್ಸಲ್ ಸೆಂಟ್ರಲ್ ಶಾಲೆಯಲ್ಲಿ ಹಮ್ಮಿಕೊಂಡ ಬೇಸಿಗೆ ಶಿಬಿರ ಮುಕ್ತಾಯ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಅವರು, ಪಠ್ಯೇತರ ಚಟುವಟಿಕೆಯಲ್ಲಿ ಆಸಕ್ತಿ ಹೊಂದಿದ ಮಕ್ಕಳಿಗೆ ಪ್ರೋತ್ಸಾಹ ನೀಡಬೇಕು ಮತ್ತು ಅವರಿಗೆ ಸಹಕರಿಸಬೇಕು ಅಂದಾಗ ಮಾತ್ರ ಮಗುವಿನ ಸರ್ವತೋಮುಖ ಅಭಿವೃದ್ಧಿಯಾಗುವುದು ಎಂದರು.

ಇದೇ ಸಂದರ್ಭದಲ್ಲಿ ಮಕ್ಕಳ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಬಳಿಕ ಹಾಡು, ನೃತ್ಯ, ಸಂಗೀತ ಮತ್ತು ಯೋಗವನ್ನು ಪ್ರದರ್ಶಿಸಿದರು.

ಈ ವೇಳೆ ಶಿವಶರಣ ಮಾವೂರ, ಭೀಮಾಶಂಕರ ತಾರಾಪೂರ, ಪ್ರಶಾಂತ ಕಮತಗಿ ಸೇರಿದಂತೆ ಪ್ರಾಚಾರ್ಯರು, ಬೋಧಕ–ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಂಚಾರಿ ನಿಯಮ ಪಾಲಿಸದ ವಾಹನ ಸವಾರರಿಗೆ ದಂಡದ ಬಿಸಿ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಹೆಲ್ಮೆಟ್ ಇಲ್ಲದೇ ದ್ವಿಚಕ್ರ ವಾಹನ ಸವಾರಿ ಸೇರಿದಂತೆ ಸಂಚಾರಿ ನಿಯಮ ಪಾಲಿಸದ ವಾಹನ ಸವಾರರಿಗೆ ಇಲ್ಲಿನ ಪಿಎಸ್ಐ ಸಂಜೀವ ತಿಪರೆಡ್ಡಿ ದಂಡದ ಮತ್ತು ಪ್ರಕರಣದ ಬಿಸಿ ಮುಟ್ಟಿಸಿದರು.

ಸೋಮುವಾರ ಬೆಳಿಗ್ಗೆಯಿಂದಲೇ ಖುದ್ದು ತಾವೇ ಪ್ರಮುಖ ರಸ್ತೆಗಳಲ್ಲಿ ನಿಂತು ಸುಮಾರು 80 ಕ್ಕೂ ಹೆಚ್ಚು ವಾಹನಗಳ ದಾಖಲೆಗಳನ್ನು ಪರಿಶೀಲಿಸಿದರು. ನಂಬರ್ ಪ್ಲೇಟ್ ಮೇಲೆ ಬರೆಸಲಾದ ಚಿತ್ರ ವಿಚಿತ್ರ ಸಂದೇಶಗಳನ್ನು ಕಿತ್ತಿಸಿದರು. ಆರ್.ಸಿ ಪುಸ್ತಕ, ಚಾಲನಾ ಪರವಾನಗೆ, ವಿಮೆ ಸೇರಿದಂತೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ದಾಖಲೆಗಳನ್ನು ನೀಡದವರ ಮೇಲೆ ಪ್ರಕರಣ ದಾಖಲಿಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಸವಾರಿ ಮಾಡಬೇಕು. ಸುರಕ್ಷತಾ ನಿಯಮಗಳನ್ನು ತಪ್ಪದೇ ಪಾಲಿಸಬೇಕು. ಬಹಳ ಜನರು ಅಪ್ರಾಪ್ತ ವಯಸ್ಕರಿಗೆ ತಮ್ಮ ವಾಹನಗಳನ್ನು ಕೊಡುತ್ತಿದ್ದಾರೆ. ಇದು ನಿಯಮಬಾಹಿರ, ಬಿಸಿ



ರಕ್ತದ ಪಡ್ಡೆ ಹುಡುಗರು ಯಾವ ನಿಯಮವನ್ನೂ ಪಾಲಿಸದೇ ಎಲ್ಲಂದರಲ್ಲಿ ಅತೀ ವೇಗವಾಗಿ ವಾಹನ ಚಲಾಯಿಸುತ್ತಿರುವ ಬಗ್ಗೆ ದೂರುಗಳು ಕೇಳಿ ಬರುತ್ತಿವೆ. ಯಾರೂ ಕೂಡ ತಮ್ಮ ವಾಹನಗಳನ್ನು ಅಪ್ರಾಪ್ತರ ಕೈಗೆ ಕೊಡಕೂಡದು. ಸಂಚಾರಿ ನಿಯಮಗಳ ಉಲ್ಲಂಘನೆಯಾದಲ್ಲಿ ಮುಲಾಜಿಲ್ಲದೇ ಸೂಕ್ತ ಕ್ರಮ ಕೈಗೊಳ್ಳುವದಾಗಿ ಎಚ್ಚರಿಸಿದರು.

ಬಸವೇಶ್ವರ ವೃತ್ತದದಲ್ಲಿ ಪರಿಶೀಲನೆ ಕಾರ್ಯಾಚರಣೆ ಕೈಗೊಂಡಿದ್ದರೆ ಬಸ್ ಇಲ್ದಾಣದ ಬಳಿ ಅದೆಷ್ಟೋ ವಾಹನಗಳು ತಮ್ಮ ಸವಾರಿಯ ದಿಕ್ಕನ್ನು ಬದಲಾಯಿಸಿದ್ದವು. ಈ ಪರಿಶೀಲನೆ ಕಾರ್ಯಾಚರಣೆ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

ಈ ವೇಳೆ ಎಎಸ್ಐಗಳಾದ ಬಿ.ಜೆ.ಕಾಸರ, ಕೆ.ಎಸ್. ಅಸ್ಕಿ, ಎಂ.ಪಿ.ಹೋಕಳೆ, ಡಿ.ಎಚ್.ಬಾಗೇವಾಡಿ, ಬಿ.ಡಿ.ಪವಾರ ಮತ್ತು ಸಿಬ್ಬಂದಿಗಳಾದ ಅರುಣ ಯಾಳವಾರ, ಮಲ್ಲನಗೌಡ ಬಿರಾದಾರ, ಸಿ.ಎಸ್. ಬಿರಾದಾರ, ಚಿದಾನಂದ ಸುರಗಿಹಳ್ಳಿ, ಶಿವರಾಜ ನಾಗರೆಡ್ಡಿ, ಎಂ.ಬಿ.ಮುಳವಾಡ ಇದ್ದರು.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಉದಯರಶ್ಮಿ ನ್ಯೂಸ್

ವಿಜಯಪುರ: ಸಿಂದಗಿ ರಸ್ತೆಯಲ್ಲಿರುವ ಅಲ್ಲಾಪುರ ತಾಂಡಾದ ಶ್ರೀಧರ ಪೋಮ್‌ಸಿಂಗ ರಾಠೋಡ(29) ಎಂಬ ಯುವಕ ಕಾಣೆಯಾಗಿದ್ದಾನೆ ಎಂದು ಗೋಲ್‌ಗುಮ್ಮಜ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಈತ ಮಹಾರಾಷ್ಟ್ರದ ವಿಪ್ರೋ ಎನ್ನುವ ಕಂಪನಿಯಲ್ಲಿ ನೌಕರನಾಗಿದ್ದು, ಮೇ.4ರಂದು ನಸುಕಿನ ಜಾವ 5 ಗಂಟೆ ಸುಮಾರಿಗೆ ಪುಣೆಗೆ ಹೊಗಿ ತನಗೆ ಬರುವ ಬಾಕಿ ಸಂಬಳವನ್ನು ತೆಗೆದುಕೊಂಡು ಬರುತ್ತೇನೆಂದು ಹೋದವನು ಮನೆಗೆ ಬಾರದೇ ಹಾಗೂ ಫೋನ್ ಸಂಪರ್ಕಕ್ಕೆ ಸಿಗದೆ ಕಾಣೆಯಾಗಿದ್ದಾನೆಂದು ಕಾಣೆಯಾದ ಯುವಕನ ಅಣ್ಣ ಸತೀಶ್ ಪೋಮಸಿಂಗ್ ರಾಠೋಡ ದೂರು ದಾಖಲಿಸಿದ್ದಾರೆ.



ಕಾಣೆಯಾದ ಯುವಕ ಮೈಯಿಂದ ಸಾದಾರಣ ಮೈಕಟ್ಟು, ಕೋಲುಮುಖ, ನೆಟ್ಟನೆಯ ಮೂಗು, ಸಾದಗಪ್ಪು ಮೈ ಬಣ್ಣ, ತಲೆಯಲ್ಲಿ ಕರಿ–ಬಿಳಿ ಕೂದಲು, ಚಿಗುರು ಮೀಸೆ, ಕುರುಚಲ ಗಡ್ಡ ಬಿಟ್ಟಿದ್ದು, ಕನ್ನಡಕ ಧರಿಸಿದ್ದು, ಕನ್ನಡ, ಹಿಂದಿ, ಇಂಗ್ಲೀಷ್, ಲಂಬಾಣಿ ಭಾಷೆ ಮಾತನಾಡುತ್ತಾನೆ. ಬಲಗೈಯಲ್ಲಿ ಮಾಮ ಮತ್ತು ಡ್ಯಾಡ್ ಅಂತ ಇಂಗ್ಲಿಷ್‌ನಲ್ಲಿ ಟ್ಯಾಟೋ ಹಾಕಿಸಿದ್ದು ಇರುತ್ತದೆ.

ಸಾರ್ವಜನಿಕರು ಈ ವ್ಯಕ್ತಿಯ ಸುಳಿವು ಸಿಕ್ಕಲ್ಲಿ ಗೋಲಗುಮ್ಮಜ್ ದೂರವಾಣಿ ಠಾಣೆ ಸಂಖ್ಯೆ 08352–250214, 08352–250252, 08352–253100, 08352–250152, 0831–2405201 ಸಂಖ್ಯೆಗೆ ಕರೆಮಾಡಿ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇದೇ 22ರಿಂದ ರೇವತಗಾಂವದ ಶ್ರೀ ರೇವಣಸಿದ್ದೇಶ್ವರ ಜಾತ್ರೆ

ಉದಯರಶ್ಮಿ ನ್ಯೂಸ್

ಚಡಚಣ: ಇದೇ 22ರಿಂದ ಮೇ 24 ರ ಶುಕ್ರವಾರದವರೆಗೆ ರೇವತಗಾಂವ ಗ್ರಾಮದ ಶ್ರೀ ರೇವಣಸಿದ್ದೇಶ್ವರ ಜಾತ್ರಾ, ಮಹಾದ್ವಾರ ಕಳಸಾರೋಹಣ ಹಾಗೂ ಸುಮಂಗಲೆಯರ ಕುಂಭ ಮೇಳದೊಂದಿಗೆ ಕಾಶೀ ಜಗದ್ಗುರುಗಳ ಸಾರೋಟ ಉತ್ಸವ ಕಾರ್ಯಕ್ರಮದ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಬುಧವಾರ ಬೆಳಗ್ಗೆ 10 ಗಂಟೆಗೆ ಟ್ರ್ಯಾಕ್ಟರ್ ಟ್ರೇಲರ್ ಎಳೆಯುವ ಸ್ಪರ್ಧೆ ನಡೆಯಲಿದೆ. ಸಾಯಂಕಾಲ 06 ಗಂಟೆಗೆ ನಂದಿಧ್ವಜ ಮೆರವಣಿಗೆಯು ಕೃಷ್ಣಪ್ಪ ಹೂಗಾರರವರ ಮನೆಯಿಂದ ವಿವಿಧ ವಾದ್ಯವೈಭವಗಳೊಂದಿಗೆ ಹೋರಟು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀ ರೇವಣಸಿದ್ದೇಶ್ವರ ದೇವಸ್ಥಾನ ತಲುಪುವುದು. ನಂತರ ರಾತ್ರಿ 09 ಗಂಟೆಗೆ ಚಿತ್ರ ವಿಚಿತ್ರವಾದ ಮದ್ದು ಸುಡುವುದು. ರಾತ್ರಿ 10 ಗಂಟೆಗೆ ಪ್ರಸಾದ ಕಡಾಯಿಗೆ ನೀರು ಹಾಕುವ ಕಾರ್ಯಕ್ರಮ ಜರುಗುವುದು.

ಗುರುವಾರ ನಸುಕಿನ ಜಾವ 05 ಗಂಟೆಗೆ ಶ್ರೀ ರೇವಣಸಿದ್ದೇಶ್ವರರಿಗೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಹಾಗೂ ಭಕ್ತರಿಂದ ದೀರ್ಘದಂಡ ನಮಸ್ಕಾರವು ನಡೆಯಲಿದೆ. ನಂತರ ಭಕ್ತ–ರಿಗೆ ಮಹಾಪ್ರಸಾದ ವಿತರಣೆ. ಮುಂಜಾನೆ 10:30 ಕಾಶೀ ಜಗದ್ಗುರುಗಳಾದ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯರ ಸುಮಂಗಲೆಯರ ಕುಂಭ ಮೇಳದೊಂದಿಗೆ ಸಾರೋಟ ಉತ್ಸವದೊಂದಿಗೆ ಪುರ ಪ್ರವೇಶ. ನಂತರ ಜಗದ್ಗುರುಗಳ ಅಮೃತ ಹಸ್ತದಿಂದ ಮಹಾದ್ವಾರ ಕಳಸಾರೋಹಣ ಕಾರ್ಯಕ್ರಮ ಜರುಗುವುದು. ರಾತ್ರಿ 09 ಗಂಟೆಗೆ ಜೈ ಹನುಮಾನ ಹರದೇಶಿ ಗೀಗೀ ಮದಗಳ ಕಲಾಮೇಳ ಕೆಂಭಾವಿ ಸುರೇಶ ಹಂಗರಗಿ ಹಾಗೂ ಸಂಗಡಿಗರು ಮತ್ತು ಶ್ರೀ ಗೌ–ರಿಶಂಕರ ಗೀಗೀ ಕಲಾಮೇಳ ಮಸಬಿನಾಳದ ವಿದ್ಯಾಶ್ರೀ ಮಸಬಿನಾಳ ಇವರುಗಳ ನೇತೃತ್ವದಲ್ಲಿ ಸುಪ್ರಸಿದ್ಧ ಗೀಗೀ ಪದಗಳು ಜರುಗುವವು.

ಶುಕ್ರವಾರದಂದು ಬೆಳಗ್ಗೆ 6 ಗಂಟೆಗೆ ಭಕ್ತರಿಂದ ಸಕ್ಕರೆ – ಬೆಲ್ಲ ಹಂಚುವ ಕಾರ್ಯಕ್ರಮ ಮತ್ತು ಮುಂಜಾನೆ 07 ಗಂಟೆಗೆ ವಿವಿಧ ವಾದ್ಯವೈಭವಗಳೊಂದಿಗೆ ಶ್ರೀ ರೇವಣಸಿದ್ದೇಶ್ವರರ ಪಲ್ಲಕ್ಕಿ ಸಬೀನ ತಿರುಗುವುದು. ಸಾಯಂಕಾಲ 04 ಗಂಟೆಗೆ ಜಂಗಿ ನಿಕಾಲಿ ಕುಸ್ತಿಗಳು ಜರುಗುವುದು. ರಾತ್ರಿ 9 ಗಂಟೆಗೆ ಶ್ರೀ ಬಸವೇಶ್ವರ ನಾಟ್ಯ ಸಂಘ ರೆಬಿನಾಳದ ಶ್ರೀಶೈಲ ಅಂಗಡಿಯವರ ನಿರ್ದೇಶನದಲ್ಲಿ 'ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮ' ಎಂಬ ಭಕ್ತಿಮಯ ಸುಂದರ ನಾಟಕ ಜರುಗುವುದು.



# ಮೇ.21ರಂದು ಅಹವಾಲು ಸ್ವೀಕಾರ

ಮುದ್ದೇಬಿಹಾಳ: ಪಟ್ಟಣದ ತಹಶೀಲ್ದಾರ ಕಚೇರಿಯಲ್ಲಿ ಮೇ.21 ರಂದು ಬೆಳಿಗ್ಗೆ 11 ಗಂಟೆಯಿಂದ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇ–ರಿಗಳಲ್ಲಿನ ಕೆಲಸಕ್ಕೆ ವಿನಾ ಕಾರಣ ವಿಳಂಬ, ಲಂಚಕ್ಕೆ ಬೇಡಿಕೆ, ಕಳಪೆ ಕಾಮಗಾರಿ, ಸರ್ಕಾರಿ ಹಣದ ದುರುಪಯೋಗ, ಅಕ್ರಮ ಆಸ್ತಿ ಸಂಪಾದನೆ, ಸೇರಿದಂತೆ ಇತರ ದೂರುಗಳನ್ನು ಸೂಕ್ತ ಸಾಕ್ಷಾಧಾರಗಳ ಸಮೇತ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು.

ನಿಮ್ಮ ದೂರು ಲೋಕಾಯುಕ್ತ ಅಧಿನಿಯಮದ ದೂರು ಅರ್ಜಿ ನಮೂನೆ–1 ಮತ್ತು 2 ರಲ್ಲಿ ಭರ್ತಿ ಮಾಡಿ ನೋಟರಿಯವರಿಂದ ಅಫಿಡವಿಟ್ ಮಾಡಿಸಿ ಜೊತೆಗೆ ದೂರಿನ ಕುರಿತು ಸಾರಾಂಶವುಳ್ಳ ಪ್ರತಿಯನ್ನು ಟೈಪ್ ಮಾಡಿಸಿ ಇಲ್ಲವೇ ಕೈಬರಹದಲ್ಲಿಯೂ ಕೊಡಬಹುದು.

# ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿ ಅಳವಡಿಸಲು ಸರ್ಕಾರ ಆದೇಶ

ಉದಯರಶ್ಮಿ ನ್ಯೂಸ್

ಬೆಂಗಳೂರು: ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿ ಅಳವಡಿಸುವಂತೆ ಸೂಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ರಾಜ್ಯ ಸರ್ಕಾರದ ಕಚೇರಿಗಳಲ್ಲಿನ ವಾಹನ ಚಾಲಕರು, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾ ಸಿಬ್ಬಂದಿ ಮತ್ತು ಗ್ರೂಪ್ ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದೆ.

ಡಿಸೆಂಬರ್ 21, 2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿ ಅಳವಡಿಸುವ ನೀತಿಯನ್ನು ಜಾರಿಗೊಳಿಸಲು ನಿರ್ಣಯಿಸಲಾಗಿದೆ. ಆದ್ದ–ರಿಂದ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನಡೆಯುವ ಎಲ್ಲಾ ಹೊರಗುತ್ತಿಗೆ ನೇಮಕಾತಿಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮವನ್ನು ಕಡ್ಡಾಯವಾಗಿ ಪಾಲಿಸುವಂತೆ ಆದೇಶದಲ್ಲಿ ಸೂಚಿಸಲಾಗಿದೆ.



ಮೀಸಲಾತಿ ನಿಯಮಗಳು ಹೀಗಿವೆ..

ಹೊರಗುತ್ತಿಗೆ ಮೀಸಲಾತಿ ನೀತಿಯು 45 ದಿನಗಳಿಗಿಂತ ಕಡಿಮೆ ಅವಧಿಯ ನೇಮಕಾತಿಗಳಿಗೆ ಅನ್ವಯಿಸುವುದಿಲ್ಲ.

ಪ್ರತಿವರ್ಷ ಹೊರ ಸಂಪನ್ಮೂಲ ಏಜೆನ್ಸಿಗಳಿಂದ ಕೆಟಿಪಿಪಿ ಅಧಿನಿಯಮ 1999ರಂತೆ ಟೆಂಡರ್ ಕರೆಯುವಾಗ ಕಡ್ಡಾಯವಾಗಿ ಮೀಸಲಾತಿ ಸಿಬ್ಬಂದಿಯನ್ನು ಪಡೆಯಲು ಷರತ್ತುಗಳನ್ನು ನಮೂದಿಸಬೇಕು.

ಹೊರಗುತ್ತಿಗೆ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಹಿಂದುಳಿದ ವರ್ಗಗಳಿಗೆ ನಿಗದಿಪಡಿಸಿದ ಮೀಸಲಾತಿ ಪ್ರಮಾಣದಲ್ಲಿ ಕನಿಷ್ಠ ಶೇ.33ರಷ್ಟು ಮಹಿಳೆಯರನ್ನು ನೇಮಕಾತಿ ಮಾಡಿಕೊಳ್ಳಬೇಕು.

ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಕಡ್ಡಾಯವಾಗಿ ಹೊರ ಸಂಪನ್ಮೂಲ ಏಜೆನ್ಸಿಯು ಅಂತಿಮಗೊಳಿಸಿದ ಸಿಬ್ಬಂದಿಯ ಪಟ್ಟಿ ಮೀಸಲಾತಿಯಂತೆ ಇರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಜಾತಿ ಪ್ರಮಾಣ ಪತ್ರ ಮತ್ತು ಇತರೆ ದಾಖಲೆಗಳನ್ನು ಹೊರ ಸಂಪನ್ಮೂಲ ಏಜೆನ್ಸಿ ಪಡೆದು ನಿರ್ವಹಿಸಬೇಕು. ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಈ ಬಗ್ಗೆ ಪರಿಶೀಲಿಸಿ ಕಾರ್ಯಾದೇಶವನ್ನು ನೀಡ0ಲು ಕ್ರಮವಹಿಸಬೇಕು. (ಸಿಂಧುತ್ವ ಪ್ರಮಾಣ ಪತ್ರದ ಅಗತ್ಯವಿರುವುದಿಲ್ಲ)

ಒಂದು ವೇಳೆ ನೇಮಕಾತಿಗೊಂಡ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗದೇ ಇದ್ದಲ್ಲಿ/ ಅರ್ಧದಲ್ಲಿ ಬಿಟ್ಟಿದಲ್ಲಿ ಅಂತಹ ಖಾಲಿ ಉಳಿಯುವ ಸ್ಥಾನವನ್ನು ಭರ್ತಿ ಮಾಡಲು ಅದೇ ಪ್ರವರ್ಗದ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳಲು ಅಭ್ಯರ್ಥಿಗಳನ್ನು ಒದಗಿಸುವ ಏಜೆನ್ಸಿ ಕ್ರಮ ಕೈಗೊಳ್ಳಬೇಕು.

ಯಾವುದೇ ಇಲಾಖೆ ಕನಿಷ್ಠ 20 ಅಭ್ಯರ್ಥಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಸಂದರ್ಭದಲ್ಲಿ ಮಾತ್ರ ಮೀಸಲಾತಿ ನೀತಿಯನ್ನು ಜಾರಿಗೊಳಿಸಬೇಕು.

ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಅಭ್ಯರ್ಥಿಯ ವಯೋಮಿತಿ 18 ವರ್ಷ ಮತ್ತು ಗರಿಷ್ಠ ವಯೋಮಿತಿ 60 ವರ್ಷಗಳಾಗಿರಬೇಕು.

ಸಾಮಾಜಿಕ ನ್ಯಾಯ ಮತ್ತು ಸಮಾನ ಉದ್ಯೋಗವಕಾಶಗಳನ್ನು ಒದಗಿಸುವ ದೃಷ್ಟಿಯಿಂದ ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿಯನ್ನು ಅಳವಡಿಸುವುದ–ರಿಂದ ಯಾವುದೇ ಕಾರಣಕ್ಕಾಗಿ ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡಲು ಪರಿಗಣಿಸುವಂತಿಲ್ಲ.

ಈ ಮೇಲಿನ ನಿಯಮಗಳು ಸರ್ಕಾರದ ಎಲ್ಲಾ ಇಲಾಖೆಗಳು, ಸ್ವಾಯುತ್ತ ಸಂಸ್ಥೆಗಳು, ನಿಗಮಗಳು, ಮಂಡಳಿಗಳು ಮತ್ತು ವಿಶ್ವವಿದ್ಯಾನಿಲಯಗಳಿಗೆ ಅನ್ವಯಿಸಲಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರಂದೀಪ್ ಡಿ ಅವರು ಹೊರಡಿಸಿದ ಆದೇಶದಲ್ಲಿ ತಿಳಿಸಲಾಗಿದೆ.

# ಚನಬಸಯ್ಯ ಹಿರೇಮಠ ಅವರಿಗೆ ಸನ್ಮಾನ

ಉದಯರಶ್ಮಿ ನ್ಯೂಸ್



ವಿಜಯಪುರ: ಜಿಲ್ಲೆಯ ಕಿಸಾನ ಕಾಂಗ್ರೆಸ್‌ನ ಜಿಲ್ಲಾ ಉಪಾಧ್ಯಕ್ಷರಾದ ಚನಬಸಯ್ಯ ಹಿರೇಮಠ ಅವರನ್ನು ಗಣೇಶ ನಗರದ ಅವರ ಅಭಿಮಾನಿಗಳಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೊನಮಲ್ಲಗೌಡ ಸಾರವಾಡ ಅವರು ಮಾತನಾಡುತ್ತಾ, ಚನಬಸಯ್ಯ ಅವರು ಬಹಳ ಒಳ್ಳೆಯ ಮೃದು ಸ್ವಾಭಾವದ ಎಲ್ಲರೊಂದಿಗೆ ಸರಳವಾಗಿ ಬೆರೆಯುವ ವ್ಯಕ್ತಿತ್ವ ಉಳ್ಳವರು, ಅವರಿಗೆ ಈ ನೂತನ ಹುದ್ದೆ ಕೊಟ್ಟಿರುವುದು ಸ್ವಾಗತಾರ್. ಹ ನಿಮ್ಮಿಂದ ಜಿಲ್ಲೆಯ ರೈತರ ಕಷ್ಟ ಬಗೆಹರಿಸುವಂತಹ ಶಕ್ತಿ ಬಂದು ಒಳ್ಳೆಯ ಸಂಘಟನೆ ಮಾಡುವಂತಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಸಲೀಮ್ ಕಲಾದಗಿ ಅಶೋಕ ಬಾಗೇವಾಡಿ ಡಿ ಎಸ್ ಎಸ್ ಜಿಲ್ಲಾ ಸಂಚಾಲಕರಾದ ಚನ್ನು ಕಟ್ಟಿಮನಿ,ಮುತ್ತುಗೌಡ ಪಾಟೀಲ ಗ್ರಾಪಂ ಸದಸ್ಯರು ಸೋಲವಾಡಗಿ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ವಾಸೀಮ್ ಇನಾಮ್ದಾರ, ರಾಮನಗೌಡ ಪಾಟೀಲ ಬ್ಯಾಲಾಳ, ಲಕ್ಷ್ಮೀ ನಗರದ ಅಭಿವೃದ್ಧಿ ಸಂಘ ಅಧ್ಯಕ್ಷರಾದ ಪ್ರವೀಣ ಕಿಚಡಿ, ಪ್ರದೀಪ್ ಮಿಸ್ಕೀನ್ ಕಿಸಾನ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಕಲ್ಲಪ್ಪ ಪಾರಶೆಟ್ಟಿ, ಈಶ್ವರ ಹೂಗಾರ, ಶಂಕರ್ ಬಜಂತ್ರಿ, ಸಾಧಿಕ್ ಹೋನ್ನುಟಗಿ, ಶಿವು ಕಟ್ಟಿಮನಿ ಉಪಸ್ಥಿತರಿದ್ದರು.

---

## 1ನೇ ಪುಟದಿಂದ: ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವ ಮಾತೇ ಇಲ್ಲ: ಸಿಎಂ

1ನೇ ಪುಟದಿಂದ:

ಅಧಿಕಾರಿಗಳು ತಿಳಿಸಿದರು. ನಾವು ಮಧ್ಯವರ್ತಿಗಳ ಹಾವಳಿ ಇಲ್ಲದಂತೆ ನೇರ ನಾಡಿನ ಜನತೆಯ ಖಾತೆಗೆ ಹಣ ಜಮೆ ಮಾಡಿದ್ದೇವೆ" ಎಂದು ತಿಳಿಸಿದರು.


"ಶಕ್ತಿ ಯೋಜನೆಯಲ್ಲಿ ಏಪ್ರಿಲ್ ಕೊನೆಯವರೆಗೂ 201 ಕೋಟಿ ಮಹಿಳೆಯರು ಉಚಿತವಾಗಿ ಬಸ್‌ನಲ್ಲಿ ಸಂಚರಿಸಿದ್ದಾರೆ. ಯಾವ ಕಾರಣಕ್ಕೂ ನಾವು ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ. ನಮ್ಮ ಯೋಜನೆಗಳು ಬಡ ಜನರಿಗೆ ಆರ್ಥಿಕವಾಗಿ ಸಹಾಯ ಮಾಡಿವೆ" ಎಂದರು.

"ಅಭಿವೃದ್ಧಿಗೆ ಹಿಂದಿನ ಸರ್ಕಾರಕ್ಕಿಂತ ಹೆಚ್ಚು ಹಣ ಮೀಸಲಿಟ್ಟಿದ್ದೇವೆ. ಹೆಚ್ಚು ಹಣ ಖರ್ಚು ಮಾಡಿದ್ದೇವೆ. ಬೊಮ್ಮಾಯಿ ಬಜೆಟ್ ಗಾತ್ರಕ್ಕಿಂತ ನಮ್ಮ ಸರ್ಕಾರದ ಬಜೆಟ್ ಗಾತ್ರ ಹೆಚ್ಚಾಗಿದೆ. ನಮ್ಮ ಸರ್ಕಾರ ಪಾಪರ್ ಆಗಿದ್ದರೆ ಇದು ಸಾಧ್ಯವಿತ್ತಾ?" ಎಂದು ಪ್ರಶ್ನಿಸಿದರು. ನುಡಿದಂತೆ ನಡೆದು 7.5 ಕೋಟಿ ಜನರ ಆಶಯ ಈಡೇರಿಸಿದ್ದೇವೆ. ನಮಗೆ ಆಶೀರ್ವಾದ ಮಾಡಿ ಬಹುಮತದಿಂದ ಗೆಲ್ಲಿಸಿದ ಜನತೆಗೆ ಮಾಧ್ಯಮಗಳ ಮೂಲಕ ಅಭಿನಂದನೆ ಸಲ್ಲಿಸುವೆ" ಎಂದರು.

# ಜೀವನ ನಮ್ಮದೇ ಪ್ರತಿಬಿಂಬ


ಉದಯರಶ್ಮಿ ದಿನಪತ್ರಿಕೆ

ಅಣ್ಣ–ತಂಗಿ ನಡುವಿನ ಜಗಳ ತಾರಕಕ್ಕೇರಿ, ತಂಗಿಯ ಗೊಂಬೆಯನ್ನು ಅಣ್ಣ ಒಡೆದುಹಾಕಿದ. ಅದಕ್ಕೆ ತಾಯಿ ಗದರಿದಳು. ತಂಗಿಯೆದುರು ಅವಮಾನವಾಯಿತೆಂದು ಭಾವಿಸಿದ ಮಗ ತಾಯಿಗೇ ಎದುರುತ್ತರ ನೀಡಿದ, ಬಿರುನುಡಿಗಳನ್ನಾಡಿದ. ಆವೇಶದಲ್ಲಿ ಮನೆಬಿಟ್ಟು ಊರಾಚೆಯ ಬೆಟ್ಟದ ಬಳಿ ಬಂದ. ಅಮ್ಮನ ಗದ–ರಿಕೆಯನ್ನು ಮನದಲ್ಲಿಟ್ಟುಕೊಂಡು 'ನಾನು ನಿನ್ನನ್ನು ದ್ವೇಷಿಸುತ್ತೇನೆ' ಎಂದು ಜೋರಾಗಿ ಕಿರುಚಿದ. ಕ್ಷಣಾರ್ಧದಲ್ಲೇ 'ನಾನು ನಿನ್ನನ್ನು ದ್ವೇಷಿಸುತ್ತೇನೆ' ಎಂಬ ಮಾರ್ದನಿ ಅವನ ಕಿವಿಗಪ್ಪಳಿಸಿತು. ಬಾಲಕನಿಗೆ ಭಯವಾಗಿ ಮನೆಗೆ ಓಡಿಬಂದು ಅಮ್ಮನ ಮಡಿಲಗೂಡಲ್ಲಿ ಗುಬ್ಬಚ್ಚಿಯಾದ, ಬಿಕ್ಕಳಿಸಿ ಅಳಲು ಪ್ರಾರಂಭಿಸಿದ. ಅಮ್ಮ ಮಗನ ತಲೆ ನೇವರಿಸುತ್ತ ಕಾರಣ ಕೇಳಲಾಗಿ, 'ಬೆಟ್ಟದ ಬಳಿ ಯಾರೋ ಕೆಟ್ಟ ಬಾಲಕ ನನ್ನನ್ನು ದ್ವೇಷಿಸುವುದಾಗಿ ಗರ್ಜಿಸಿದ' ಎಂದು ಹೇಳಿದ. ಅನುಭವಿ ಅಮ್ಮನಿಗೆ ಎಲ್ಲ ಅರ್ಥ–ವಾಗಿ, 'ಮಗೂ, ಬೆಟ್ಟದ ಬಳಿ ಇನ್ನೊಮ್ಮೆ ಹೋಗಿ 'ನಾನು ನಿನ್ನನ್ನು ಪ್ರೀತಿಸುವೆ' ಎಂದು ಜೋರಾಗಿ ಕೂಗು' ಎಂದು ಸಮಾಧಾನ ಮಾಡಿ ಕಳಿಸಿದಳು. ಬಾಲಕ ಹಾಗೇ ಮಾಡಿದಾಗ, 'ನಾನು ನಿನ್ನನ್ನು ಪ್ರೀತಿಸುವೆ' ಎಂಬ ದನಿ ಬೆಟ್ಟದ ಸುತ್ತಲೆಲ್ಲ ಮಾರ್ದನಿಸಿತು. ಅತೀವ ಸಂತೋಷಗೊಂಡ ಬಾಲಕ ಮನೆಗೆ ಮರಳಿ 'ಹೀಗೇಕೆ?' ಎಂದು ಕೇಳಿದಾಗ, 'ಮಗೂ, ಜೀವನ ಎಂಬುದು ಒಂದು ಪ್ರತಿಫಲಕವಿದ್ದಂತೆ; ನಾವು ಸುತ್ತಲಿನವರಿಗೆ ಏನನ್ನು ನೀಡುತ್ತೇವೋ ಮರಳಿ ಅದನ್ನೇ ಪಡೆಯುತ್ತೇವೆ. ಆದ್ದರಿಂದ ಸಮಾಜಕ್ಕೆ ಸಾಧ್ಯವಾದಷ್ಟೂ ಒಳ್ಳೆಯದನ್ನೇ ಕೊಡುಗೆಯಾಗಿ ನೀಡಲು ಯತ್ನಿಸಬೇಕು' ಎಂದು ಅಮ್ಮ ತಿಳಿಹೇಳಿದಳು. ಸಂತಸಗೊಂಡ ಮಗನ ಕಣ್ಣುಗಳಲ್ಲಿ ಅರಿವಿನ ದೀಪ ಬೆಳಗಿತು.









ಜೀವನವೆಂಬುದು ಕನ್ನಡಿಯಲ್ಲಿ ಕಾಣುವ ನಮ್ಮದೇ ಪ್ರತಿಬಿಂಬವಿದ್ದಂತೆ. ನಮ್ಮ ಆಲೋಚನಾ ವಿಧಾನ ಮತ್ತು ನಡವಳಿಕೆಗಳ ಕುರಿತಾಗಿ ನಾವು ಸದಾ ಜಾಗೃತರಾಗಿರಬೇಕು. ಬದುಕಲ್ಲಿ ನಮಗೆ ದಕ್ಕುವ ಜಯ, ವೈಫಲ್ಯ ಎಲ್ಲವೂ ನಮ್ಮ ಚಟುವಟಿಕೆಗಳ ಪ್ರತಿಫಲಗಳೇ. ಬೇವಿನ ಸಸಿ ನೆಟ್ಟು ಮಾವಿನ ಹಣ್ಣನ್ನು ಪಡೆಯಲಾದೀತೇ? ಕೊಳೆತ ಮನಸ್ಸು ಬದುಕನ್ನು ಕೆಡಿಸುತ್ತದೆ, ಪ್ರಬುದ್ಧ ಮನಸ್ಸು ಬಾಳನ್ನು ಬೆಳಗುತ್ತದೆ. ನಡತೆ ಎಂಬುದು ತಳಪಾಯದ ಕಲ್ಲಿದ್ದಂತೆ. ಅದರ ಮೇಲೆ ಜೀವನ ಸಾರ್ಥಕತೆಯ ಕಟ್ಟಡ ಕಟ್ಟಬೇಕು, ತನ್ಮೂಲಕ ಬದುಕನ್ನು ಸುಂದರವಾಗಿಸಿಕೊಳ್ಳಬೇಕು.

ಕೃಪೆ: ಜಯಶ್ರೀ ಅಬ್ಬಿಗೇರಿ

ಸಂಗ್ರಹ :ವೀರೇಶ್ ಅರಸಿಕೆರೆ

# ರಾಜ್ಯಕ್ಕೆ ದ್ವಿತಿಯ ಸ್ಥಾನ: ರಾಮು ವಡ್ಡರ ಗೆ ಸನ್ಮಾನ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಪಟ್ಟಣದ ಅರ್ಜುನ ಚಿಕ್ಕಮಕ್ಕಳ ಆಸ್ಪತ್ರೆಯಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ 599(ಶೇ.96%) ಅಂಕಗಳನ್ನು ಪಡೆದು ರಾಜ್ಯಕ್ಕೆ ದ್ವಿತಿಯ ಸ್ಥಾನ ಗಿಟ್ಟಿಸಿಕೊಂಡ ರಾಮು ವಡ್ಡರ ಗೆ ಚೈತ್ರಾ ಆರೋಗ್ಯ, ಶಿಕ್ಷಣ ಸೇವಾ ಟ್ರಸ್ಟ್ ಮತ್ತು ದಿ.ನಾಗಮ್ಮ ಭೀಮಪ್ಪ ಬೆಳಗಲ್ಲ ಫೌಂಡೇಶನ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಈ ವೇಳೆ ಚಿಕ್ಕಮಕ್ಕಳ ತಜ್ಞ, ವೈದ್ಯ, ಡಾ.ಪರಶುರಾಮ ವಡ್ಡರ ಮಾತನಾಡಿ, ಮಕ್ಕಳಿಗೆ ಶಿಕ್ಷಣ ನೀಡುವಲ್ಲಿ ಶಿಕ್ಷಕರ ಪಾತ್ರ ಎಷ್ಟಿದೆಯೋ ಅಷ್ಟೇ ಮಹತ್ವದ ಪಾತ್ರ ಪಾಲಕರದ್ದೂ ಇರುತ್ತದೆ. ಶಾಲೆಯಿಂದ ಮನೆಗೆ ಬರುವ ಮಗುವಿಗೆ ಮನೆಯಲ್ಲಿ ಅಂದಿನ ಶಾಲಾ ಪಾಠದ ಕುರಿತು ಮನನ ಮಾಡಿಸಿದಲ್ಲಿ ಮಗುವಿನ ಬೌದ್ಧಿಕ ಬೆಳವಣಿಗೆಯಾಗುತ್ತದೆ ಎಂದರು.

ಈ ವೇಳೆ ಟ್ರಸ್ ಅಧ್ಯಕ್ಷ ಯಮನಪ್ಪ ವಡ್ಡರ, ಸದಸ್ಯರಾದ ಕುಮಾರ ವಡ್ಡರ, ಹಾಗೂ ಫೌಂಡೇನ್ ಅಧ್ಯಕ್ಷ ಹಣಮಂತ ಬೆಳಗಲ್ಲ, ಉಪಾಧ್ಯಕ್ಷ ಹಣಮಂತ ಭೈರವಾಡಗಿ, ಸದಸ್ಯರುಗಳಾದ ಮಲ್ಲಣ್ಣ ಚೌಧರಿ, ಬುಡ್ಡಾ ನಿಡಗುಂದಿ, ಯಲ್ಲಪ್ಪ ವಡ್ಡರ ಸೇರಿದಂತೆ ಮತ್ತೀತರರು ಇದ್ದರು.



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR